ವಿಜಯಪುರ | ಸಂಪುಟ 04 | ಸಂಚಿಕೆ 035 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಗುರುವಾರ, ಮಾರ್ಚ್, 26, 2026



"ಸಿದ್ದರಾಮಯ್ಯನವರೇ, ರಾಜ್ಯದ ಆರ್ಥಿಕ ಪರಿಸ್ಥಿತಿ ಎಷ್ಟು ಹದಗೆಟ್ಟಿದೆ, ಇದರ ದುಷ್ಪ-ರಿಣಾಮಗಳೇನು ಎನ್ನುವುದು ಎಲ್ಲ-ರಿಗಿಂತ ತಮಗೇ ಚೆನ್ನಾಗಿ ಗೊತ್ತಿದೆ. ಆದರೆ ಕುರ್ಚಿಗೆ ಅಂಟಿಕೊಂಡು ತಮಗೆ ತಾವೇ ಆತ್ಮವಂಚನೆ ಮಾಡಿಕೊಳ್ಳುತ್ತಿದ್ದೀರಲ್ಲ, ಇದು ನಿಮ್ಮ ರಾಜಕೀಯ ಜೀವನದ ಅತ್ಯಂತ ದೊಡ್ಡ ದುರಂತ."

■ ಆರ್.ಅಶೋಕ್
ವಿಧಾನ ಸಭೆ ವಿಪಕ್ಷ ನಾಯಕರು

## ಪರೀಕ್ಷಾ ಕೇಂದ್ರಗಳಿಗೆ ಜಿಲ್ಲಾಧಿಕಾರಿ ಡಾ.ಆನಂದ.ಕೆ ಭೇಟಿ, ಪರಿಶೀಲನೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ನಗರದ ಮರಾಠಿ ವಿದ್ಯಾಲಯ ಹಾಗೂ ಹೇಮರಡ್ಡಿ ಮಲ್ಲಮ್ಮ ಪ್ರೌಢ ಶಾಲೆಗಳ ಎಸ್ಸೆಸ್ಸೆಲ್ಸಿ ಪರೀಕ್ಷಾ ಕೇಂದ್ರಕ್ಕೆ ಜಿಲ್ಲಾಧಿಕಾರಿ ಡಾ.ಆನಂದ ಕೆ ಅವರು ಬುಧವಾರ ಭೇಟಿ ನೀಡಿ, ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ಪರೀಕ್ಷೆ ಸುಸೂತ್ರವಾಗಿ ನಡೆಸುವ ನಿಟ್ಟಿನಲ್ಲಿ ಪರೀಕ್ಷಾ ಮಾರ್ಗಸೂಚಿಯನ್ವಯ ಕಾರ್ಯ ನಿರ್ವಹಿಸುವಂತೆಯೂ, ಯಾವುದೇ ಸಮಸ್ಯೆ ಬಾರದ ರೀತಿಯಿಂದ ಅತ್ಯಂತ ಜಾಗೃತೆಯಿಂದ ಕಾರ್ಯನಿರ್ವಹಿಸಿ ಸುಸೂತ್ರ ಪರೀಕ್ಷೆ ನಡೆಯುವ ನಿಟ್ಟಿನಲ್ಲಿ ಕಾರ್ಯೋನ್ಮುಖವಾಗುವಂತರ ಪರೀಕ್ಷೆಗೆ ನಿಯೋಜಿತ ಅಧಿಕಾ-ರಿಗಳಿಗೆ ಸೂಚನೆ ನೀಡಿದರು.

ಈಸಂದರ್ಭಪರೀಕ್ಷಾಕೇಂದ್ರದಲ್ಲಿ ಒದಗಿಸಿರುವ ಮೂಲಭೂತ ಸೌಲಭ್ಯ,ಭದ್ರತೆ ಕುಡಿಯುವ ನೀರು, ಅಳವಡಿಸಿರುವ ಸಿಸಿಟಿವಿ ಎಲ್ಲ ವ್ಯವಸ್ಥೆಗಳನ್ನು ಪರಿಶೀಲನೆ ನಡೆಸಿದ ಅವರು ಸಮರ್ಪಕವಾಗಿ ಇರುವಂತೆ ನೋಡಿಕೊಳ್ಳಿ, ಕಟ್ಟುನಿಟ್ಟಾಗಿ ಮೇಲ್ವಿಚಾರಣೆ ಇರಬೇಕು. ಸಮಯಪಾಲನೆ ಅನುಸ-ರಿಸಿಪ ರೀಕ್ಷೆಗೆ ನಿಯೋಜಿತ ಅಧಿಕಾರಿ,ಸಿಬ್ಬಂದಿ ವಹಿಸಿರುವ ಜವಾಬ್ದಾರಿ ಅಚ್ಚುಕಟ್ಟಾಗಿ ಬಹು ಎಚ್ಚರಿಕೆಯಿಂದ ನಿಭಾಯಿಸಿ ಎಂದು ಸೂಚನೆ ನೀಡಲಾಯಿತು.

ಈ ಸಂದರ್ಭದಲ್ಲಿ ಪರೀಕ್ಷೆಗೆ ನಿಯೋಜಿತ ಅಧಿಕಾರಿ, ಸಿಬ್ಬಂದಿ ಇದ್ದರು.

## ಮೈಸೂರಿನಲ್ಲಿ ಮಾಧ್ಯಮಗಳ ಮುಂದೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿಕೆ
# ಹೈಕಮಾಂಡ್ ಒಪ್ಪಿದರೆ ಇನ್ನೆರಡೂ ಬಜೆಟ್ ನನ್ನದೇ :ಸಿಎಂ

ಬೆಂಗಳೂರು: ಕರ್ನಾಟಕ ಬಜೆಟ್ ಬಗ್ಗೆ ಚರ್ಚೆಗಳು ನಡೆಯುತ್ತಿರುವಬೆನ್ನಲ್ಲೇರಾಜಕೀಯವಿಷಯಗಳಿಗೆಸಂಬಂಧಿಸಿದ ಚರ್ಚೆಗಳೂ ಆರಂಭವಾಗಿವೆ. ಸಿಎಂ ಬದಲಾವಣೆ ವಿಷಯವಾಗಿ ಕೇಳಿದ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿರುವ ಸಿದ್ದರಾಮಯ್ಯ,ಹೈಕಮಾಂಡ್ ಅವಕಾಶ ಕೊಟ್ಟರೆ ಮತ್ತೆರಡು ಬಜೆಟ್ ಮಂಡನೆ ಮಾಡುತ್ತೇನೆ. ಅವರು ಮುಂದುವರೆಯಿರಿ ಎಂದರೆ ಮುಂದುವರೆಯುತ್ತೇನೆ. ಎಲ್ಲವೂ ಹೈಕಮಾಂಡ್‌ಗೆ ಬಿಟ್ಟ ವಿಚಾರ ಎಂದು ಹೇಳಿದ್ದಾರೆ. ಮೈಸೂರಿನಲ್ಲಿ ಮಾಧ್ಯಮಗಳ ಜೊತೆ ಅವರು ಮಾತನಾಡಿದರು. ಈ ವೇಳೆ, ನಾಯಕತ್ವ ಬದಲಾವಣೆ ವಿಚಾರವಾಗಿ ಪ್ರತಿಕ್ರಿಯಿಸಿದರು. ಯಾರೊ ಏನೋ ಹೇಳುತ್ತಾರೆ ಎಂಬುದು ನನಗೆ ಮುಖ್ಯ ಅಲ್ಲ. ನನಗೆ ಹೈಕಮಾಂಡ್ ತೀರ್ಮಾನವಷ್ಟೇ ಮುಖ್ಯ. ಹೈಕಮಾಂಡ್ ಬಗ್ಗೆ ನನಗೆ ಸಂಪೂರ್ಣ ವಿಶ್ವಾಸ ಇದೆ ಎಂದಿದ್ದಾರೆ. ಬಜೆಟ್‌ಗೆ ಸಾಲ ಮಾಡಿದ್ದನ್ನು ಸಮರ್ಥಿಸಿಕೊಂಡ ಸಿಎಂ, ಅಭಿವೃದ್ಧಿಗಾಗಿ ಸಾಲ ಮಾಡಬೇಕಾಗುತ್ತದೆ. ಹೀಗಾಗಿ ಸಾಲ ಮಾಡಿದ್ದೇನೆ. ರಾಜ್ಯದ ಮಿತಿಯ ಒಳಗಡೆ ಸಾಲ ಮಾಡಿದ್ದೇನೆ. ಸಾಲದಿಂದ ರಾಜ್ಯದ ಜನರಿಗೆ ಹೊರೆಯಾಗಿಲ್ಲ ಎಂದು ವಿಪಕ್ಷಗಳ ಟೀಕೆಗೆ ಉತ್ತರಿಸಿದ್ದಾರೆ.






"ಮೈಸೂರಿನ ಜನರಷ್ಟೇ ಅಲ್ಲ, ಇಡೀ ನಾಡಿನ ಜನರು ನಾನು ಮುಖ್ಯಮಂತ್ರಿಯಾಗಿ ಮುಂದುವರಿಯಬೇಕು ಎಂದು ಬಯಸಿದ್ದಾರೆ. ಆದರೆ, ಅಂತಿಮ ತೀರ್ಮಾನ ಮಾಡುವುದು ಹೈಕಮಾಂಡ್'. ಹೈಕಮಾಂಡ್ ಅವಕಾಶ ಕೊಟ್ಟರೆ ಮತ್ತೆರಡು ಬಜೆಟ್ ಮಂಡಿಸುತ್ತೇನೆ. ಈ ವಿಷಯದಲ್ಲಿ ಹೈಕಮಾಂಡ್ ತೀರ್ಮಾನಕ್ಕೆ ಬದ್ಧ."

■ ಸಿದ್ದರಾಮಯ್ಯ
ಮುಖ್ಯಮಂತ್ರಿ

## ಒಳಮೀಸಲಾತಿ ಜಾರಿಗೆ ಆಗ್ರಹಿಸಿ ಮಾದಿಗ ಸಮುದಾಯ ಮನವಿ

■ ಉದಯರಶ್ಮಿ ದಿನಪತ್ರಿಕೆ




ಚಡಚಣ: ಪರಿಶಿಷ್ಟ ಜಾತಿಗಳ ಒಳಮೀಸಲಾತಿಯನ್ನು ಸಮರ್ಪಕವಾಗಿ ಜಾರಿಗೊಳಿಸುವಂತೆ ಒತ್ತಾಯಿಸಿ ಕರ್ನಾಟಕ ಪ್ರದೇಶ ಮಾದಿಗರ ಸಂಘದ ಮುಖಂಡರು ಚಡಚಣ ತಹಶೀಲ್ದಾರ ಮುಖಾಂತರ ಮುಖ್ಯಮಂತ್ರಿಗಳಿಗೆ ಬುಧವಾರ ಮನವಿ ಸಲ್ಲಿಸಿದರು.

ಮಾರ್ಚ್ 27, 2026 ರಂದು ನಡೆಯಲಿರುವ ಸಚಿವ ಸಂಪುಟ ಸಭೆಯಲ್ಲಿ 56,432 ಹುದ್ದೆಗಳನ್ನು ಭರ್ತಿ ಮಾಡುವ ನಿರ್ಧಾರ ಕೈಗೊಂಡಿರುವ ಹಿನ್ನೆಲೆಯಲ್ಲಿ, ಒಳಮೀಸಲಾತಿಯನ್ನು ಜಾರಿಗೊಳಿಸದೆ ನೇಮಕಾತಿ ನಡೆಸಿದರೆ ಮಾದಿಗ ಸಮುದಾಯಕ್ಕೆ ಭರಿಸಲಾಗದ ಅನ್ಯಾಯವಾಗುತ್ತದೆ ಎಂದು ಆತಂಕ ವ್ಯಕ್ತಪಡಿಸಿದರು.

ಪರಿಶಿಷ್ಟಜಾತಿಗಳಿಗೆನಿಗದಿಪಡಿಸಿರುವ ಶೇ.15 ಮೀಸಲಾತಿಯಲ್ಲಿ ಸಮಾನ ಅನುಪಾತದಲ್ಲಿ ಹಂಚಿಕೆ ಮಾಡಿ, ಅದರಲ್ಲಿ ಮಾದಿಗರಿಗೆ ಶೇ. 6 ಮೀಸಲಾತಿಯನ್ನು ನೀಡಬೇಕು. ಉಳಿದ ಮೀಸಲಾತಿಯನ್ನು ಇತರ ವರ್ಗಗಳಿಗೆ ಹಂಚಿಕೆ ಮಾಡಬೇಕು ಎಂದು ಮನವಿಯಲ್ಲಿ ತಿಳಿಸಿದ್ದಾರೆ.

ಸರ್ಕಾರವೇ ಒಳಮೀಸಲಾತಿಯನ್ನು ಜಾರಿಗೆ ತಂದಿರುವಾಗ ಅದನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸಬೇಕು. ಸುಪ್ರೀಂ ಕೋರ್ಟ್ ತೀರ್ಪನ್ನು ಗೌರವಿಸಿ ತಕ್ಷಣವೇ ಒಳಮೀಸಲಾತಿಯನ್ನು ಜಾರಿಗೊಳಿಸುವಂತೆ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಮನವಿಯ ಮುಂಚೆ ಮಾದಿಗ ಸಮಾಜ ಬಾಂಧವರು ತಮಟೆ ಭಾ-ರಿಸುತ್ತ ಚಡಚಣ ಪ್ರವಾಸಿ ಮಂದಿರದಿಂದ ಮೆರವಣಿಗೆ ಪ್ರಾರಂಭಿಸಿ ಬಸವೇಶ್ವರ ವೃತ್ತದಲ್ಲಿ ಕೆಲಕಾಲ ತಮ್ಮ ಬೇಡಿಕೆಗಳನ್ನು ಸರಕಾರ ಈಡೇರಿಸುವಂತೆ ಮತ್ತು ಒಳಮೀಸಲಾತಿ ಜಾರಿಯಾಗಲಿ ಎಂಬ ಘೋಷಣೆಗಳೊಂದಿಗೆ ತಮ್ಮ ಬೇಡಿಕೆಯನ್ನು ವ್ಯಕ್ತಪಡಿಸಿದರು. ನಂತರ ಚಡಚಣ ತಹಶೀಲ್ದಾರ ಕಛೇರಿಗೆ ಆಗಮಿಸಿ ಮನವಿಯನ್ನು ತಹಶೀಲ್ದಾರರ ಮೂಲಕ ಮುಖ್ಯಮಂತ್ರಿಗಳಿಗೆ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾದಿಗ ಮೀಸಲಾತಿ ಹೋರಾಟ ಸಮೀತಿಯ ವಿಜಯಪುರ ಜಿಲ್ಲಾ ಅಧ್ಯಕ್ಷ ಪ್ರಧಾನಿ ಮೂಲಿಮನಿ, ಚಡಚಣ ತಾಲೂಕ ಅಧ್ಯಕ್ಷ ಸುಭಾಸ ಗಾಯಕವಾಡ,ರೇವಣಸಿದ್ದ ಮೇಲಿನಮನಿ,ರವಿ ಕೆಂಗಾರ,ಮಹಾದೇವ ಮಾಶ್ಯಾಳ ಸೇರಿದಂತೆ ಮಾದಿಗ ಮೀಸಲಾತಿ ಹೋರಾಟ ಸಮೀತಿಯ ಸದಸ್ಯರು ಇದ್ದರು.



## ಪಿಂಚಣಿಗೆ ಸಂಬಂಧಿಸಿದ ಬೇಡಿಕೆ ಈಡೇರಿಸಲು ನಿವೃತ್ತ ನೌಕರರ ಮನವಿ

■ ಉದಯರಶ್ಮಿ ದಿನಪತ್ರಿಕೆ

ದೇವರಹಿಪ್ಪರಗಿ: ತಾಲ್ಲೂಕು ನಿವೃತ್ತ ನೌಕರರ ಸಂಘದ ಪದಾಧಿಕಾರಿಗಳು ಪಿಂಚಣಿ ಹಾಗೂ ಕುಟುಂಬ ಪಿಂಚಣಿಗೆ ಸಂಬಂಧಿಸಿದಂತೆ ಬೇಡಿಕೆ ಈಡೇರಿಸಲು ಆಗ್ರಹಿಸಿ, ತೋಳಿಗೆ ಕಪ್ಪು ಪಟ್ಟಿ ಧರಿಸಿ ತಹಶೀಲ್ದಾರ ನಿಂಗಪ್ಪ ಬಿರಾದಾರ ಅವರಿಗೆ ಮನವಿ ಸಲ್ಲಿಸಿದರು.

ಪಟ್ಟಣದ ತಹಶೀಲ್ದಾರ ಕಾರ್ಯಾಲಯಕ್ಕೆ ಬುಧವಾರ ಬೆಳಿಗ್ಗೆ ಆಗಮಿಸಿದ ತಾಲ್ಲೂಕು ನಿವೃತ್ತ ನೌಕರರ ಸಂಘದ ಪದಾಧಿಕಾರಿಗಳು ಪಿಂಚಣಿ ಸಮಸ್ಯೆ ಕುರಿತು ತಹಶೀಲ್ದಾರರ ಗಮನ ಸೆಳೆದರು. ಈ ಸಂದರ್ಭದಲ್ಲಿ ತಾಲ್ಲೂಕು ಘಟಕದ ಅಧ್ಯಕ್ಷ ಸಿ.ಕೆ. ಕುದರಿ ಮಾತನಾಡಿ, ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಸಂಸತ್ತಿನ ಅಧಿವೇಶನದಲ್ಲಿ ನಿವೃತ್ತ ನೌಕರರಿಗೆ ಹಾಗೂ ಕುಟುಂಬ ಪಿಂಚಣಿದಾರರಿಗೆ ಮುಂಬರುವ ದಿನಗಳಲ್ಲಿ ಯಾವುದೇ ವೇತನ ಪರಿಷ್ಕರಣೆ ಹಾಗೂ ವರ್ಷದಲ್ಲಿ ಎರಡು ಬಾರಿ ನೀಡುತ್ತಿರುವ ತುಟ್ಟಿಭತ್ಯೆ ನೀಡಲು ಸಾಧ್ಯವಾಗುವುದಿಲ್ಲ ಎಂಬ ವಿಷಯ ಮಂಡಿಸಿರುವುದು ನಿವೃತ್ತ ನೌಕರರು ಹಾಗೂ ಕುಟುಂಬದವರಿಗೆ ಆಘಾತಕಾರಿ ವಿಷಯವಾಗಿದೆ. ಹೀಗೆ ಮಾಡುವುದರಿಂದ ನಿವೃತ್ತ ನೌಕರರು ಹಾಗೂ ಕುಟುಂಬ ಪಿಂಚಣಿದಾರರ ಕುಟುಂಬಗಳು ಬೀದಿ ಪಾಲಾಗುತ್ತವೆ.

ಅಲ್ಲದೆ ಈ ವಿಷಯದ ಕುರಿತು ಸರ್ವೋಚ್ಚ ನ್ಯಾಯಾಲಯ ಪಿಂಚಣಿ ಭಿಕ್ಷೆಯಲ್ಲ ಅದನ್ನು ಪಡೆಯುವುದು ನಿವೃತ್ತ ನೌಕರರ ಹಕ್ಕು ಎಂದು ತೀರ್ಪು ನೀಡಿದೆ. ಆದ್ದರಿಂದ ಸರ್ಕಾರ ಪಿಂಚಣಿದಾರರ ಜೀವನ ಸುಗಮಗೊಳಿಸಲು ಈಗ ಇರುವ ಪಿಂಚಣಿ ಹಾಗೂ ಕುಟುಂಬ ಪಿಂಚಣಿಯನ್ನು ಯಥಾಸ್ಥಿತಿ ಮುಂದುವರೆಸಬೇಕು ಎಂದು ಆಗ್ರಹಿಸಿ ಮನವಿ ಸಲ್ಲಿಸಿದರು.ಎಂ.ಎಚ್.ಪಟೇಲ, ಎಸ್.ವ್ಹಿ.ಆಲಾಳಮಠ, ಕೆ.ಸಿ.ಮಠ, ಎಂ.ಆರ್.ಶಿರಸಂಗಿಮಠ, ಬಿ.ಎನ್. ಬಬಲೇಶ್ವರ, ಎ.ಸಿ.ಲೋಗಾಂವಿ, ಪಿ.ಎಸ್.ಮಿಂಚನಾಳ, ಕೆ.ಎಮ್.ನಂದಿ, ಎನ್.ಎಸ್.ಹರಸೂರ, ವೈ.ಜಿ.ತಾವರಖೇಡ, ಬಿ.ಆಯ್.ಹೊಸಳ್ಳಿ, ಲಕ್ಷ್ಮಣ ಮಡ್ಡೆಪ್ಪಗೋಳ, ಬಿ.ಜಿ.ಪಾಟೀಲ, ಬಿ.ಎಸ್.ಉತ್ನಾಳ, ಬಿ.ಎಮ್ ಕಠಾರೆ, ಹೊನವಾಡ, ಬಿ.ಎನ್.ಪಾಟೀಲ, ರಾವುತ ತಳಕೇರಿ ಇದ್ದರು.

## ಇಂದು ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಮೋರಟಗಿಯ 110/11ಕೆ.ವಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ನಾಲ್ಕನೇ ತ್ರೈಮಾಸಿಕ ನಿರ್ವಹಣಾ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದೆ.

ಈ ಉಪ ಕೇಂದ್ರದಿಂದ ಹೊರಡುವ ಎಲ್ಲಾ 11 ಕೆ.ವಿ ಮಾರ್ಗಗಳಲ್ಲಿ ಮಾ.26ರ ಬೆಳಿಗ್ಗೆ 8 ಗಂಟೆಯಿಂದ ಮಧ್ಯಾಹ್ನ 3 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ. ಗ್ರಾಹಕರು ಸಹಕರಿಸುವಂತೆ ಇಂಡಿ ಹೆಸ್ಕಾಂನ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕುಡಿವ ನೀರಿನ ಸಮಸ್ಯೆ ತಲೆದೋರದಂತೆ ಮುಂಜಾಗ್ರತೆವಹಿಸಿ

■ ಉದಯರಶ್ಮಿ ದಿನಪತ್ರಿಕೆ




**ಇಂಡಿಯಲ್ಲಿ ನಡೆದ ಟಾಸ್ಕಪೋರ್ಸ ಸಭೆಯಲ್ಲಿ ಕಂದಾಯ ಉಪವಿಬಾಗಾಧಿಕಾರಿ ಚಿದಾನಂದ ಗುರುಸ್ವಾಮಿ ಅಧಿಕಾ-ರಿಗಳಿಗೆ ಸೂಚನೆ**

ಇಂಡಿ: ಇಂಡಿ ನಗರ ಹಾಗೂ ತಾಲೂಕಿನಾದ್ಯಂತ ಎಲ್ಲಿಯೂ ಕುಡಿಯುವ ನೀರಿನ ಸಮಸ್ಯೆ ತಲೆದೋರದಂತೆ ಮುಂಜಾಗೃತೆ ಕ್ರಮವಹಿಸಿ, ಎಸ್ಸೆಸ್ಸೆಲ್ಸಿ ಪರೀಕ್ಷೆ ಪ್ರಾರಂಭವಾಗಿದ್ದು ಯಾವದೇ ಶಾಲೆ ಹಾಗೂ ಹಾಸ್ಟೇಲಗಳಲ್ಲಿ ನೀರಿನ ಸಮಸ್ಯೆ ಆಗದಂತೆ ಕ್ರಮ ಕೈಕೊಳ್ಳಬೇಕು ಎಂದು ಕಂದಾಯ ಉಪವಿಬಾಗಾಧಿಕಾರಿ ಚಿದಾನಂದ ಗುರುಸ್ವಾಮಿ ತಿಳಿಸಿದರು.

ಅವರು ನಗರದ ತಾ,ಪಂ ಸಭಾಭವನದಲ್ಲಿ ಕುಡಿಯುವ ನೀರಿನ ಸಮಸ್ಯೆಗಳ ಗಳ ಬಗ್ಗೆ ನಡೆದ ಟಾಸ್ಕಪೋರ್ಸ ಸಭೆಯಲ್ಲಿ ಅಧ್ಯಕ್ಷತೆವಹಿಸಿ ಮಾತನಾಡಿದರು.

ಬೇಸಿಗೆಯಲ್ಲಿ ನೀರಿನ ಅಭಾವ ಆಗದಂತೆ ಸಮರ್ಪಕವಾಗಿ ಕುಡಿಯುವ ನೀರು ಪೂರೈಸಬೇಕು. ನೀರಿನ ಸಮಸ್ಯೆ ಉದ್ಭವಿಸಬಹುದಾದ ಸ್ಥಳಗಳ ಕುರಿತು ಮುಂಚಿತವಾಗಿ ಮಾಹಿತಿ ಸಲ್ಲಿಸಬೇಕು ಎಂದರು.

ನಗರ ನೀರು ಸರಬರಾ-ಜಿಗೆ ಸಂಬಂದಿಸಿದಂತೆ ಅಗತ್ಯ ಮುಂಜಾಗೃತೆ ಕ್ರಮ ವಹಿಸಬೇಕು. ಗ್ರಾಪಂ ಹಂತದಲ್ಲಿಯೂ ನೀರಿನ ಸಮಸ್ಯೆ ಆಗದಂತೆ ನೋಡಿಕೊಳ್ಳಬೇಕು. ಎಂದು ಎಇಇ ಬಂಡಿಯವರಿಗೆ ಸೂಚನೆ ನೀಡಿದರು.

ಇಓ ಭೀಮಾಶಂಕರ ಕನ್ನೂರರವರು ಮಾತನಾಡಿ ಮಿರಗಿ, ಮಸಳಿ, ಗುಬ್ಬೇವಾಡ, ಕೊಳುರಗಿ, ಝಳಕಿ, ಬಸನಾಳ, ಬಬಲಾದ, ನಿಂಬಾಳ ಕೆ.ಡಿ, ಸಾಲೋಟಗಿ ಹಾಗೂ ತಡವಲಗಾ ಅಡವಿ ವಸ್ತಿಗಳ ಕುರಿತು ಗ್ರಾ.ಪಂ ಗಳಲ್ಲಿ ಚರ್ಚಿಸಬೇಕು. ಯಾವದೇ ಸಮಸ್ಯೆ ಬರದಂತೆ ಖುದ್ದಾಗಿ ಪರಿಶೀಲನೆ ನಡೆಸಬೇಕು ಎಂದು ಸೂಚಿಸಿದರು.

ಸಹಾಯಕ ನಿರ್ದೇಶಕ ಪ್ರಕಾಶ ರಾಠೋಡ, ಯೋಜನಾಧಿಕಾರಿ ನಂದೀಪ ರಾಠೋಡ, ಹೆಸ್ಕಾಂ ಎಇಇ ಎಸ್.ಆರ್. ಮೆಡೆಗಾರ, ಪೌರಾಯುಕ್ತ ನಗರ ಸಭೆ ಶಿವಾನಂದ ಪೂಜಾರಿ ಕಾರ್ಯಪಾಲಕ ಅಭಿಯಂತರ ಮನೋಜಕುಮಾರ ಗಡಬಳ್ಳಿ ಸೇರಿದಂತೆ ತಾಲೂಕಿನ ಎಲ್ಲ ಗ್ರಾ.ಪಂ ಆಡಳಿತ ಅಧಿಕಾರಿಗಳು ಮತ್ತು ಪಿಡಿಓಗಳು ಇದ್ದರು.

**ಮಹಾನಗರ ಪಾಲಿಕೆ, ವಿಜಯಪುರ**

ಸಂಖ್ಯೆ:ಮನಪಾ/ಲೋ.ವಿ/ಕಾಅ/ಡಿಎಮ್ಎ/ಟಿಎನ್‌ಡಿ/ಇ-ಪ್ರೋ/2025-26/5727 ದಿನಾಂಕ:23.03.2026

**ಕೆ.ಪಿ.ಪಿ ಪೋರ್ಟಲ್ ಅಲ್ಪಾವಧಿ ಟೆಂಡರ್ ಪ್ರಕಟಣೆ**

ವಿಜಯಪುರ ಮಹಾನಗರ ಪಾಲಿಕೆ ಬಿಡುಗಡೆಯಾದ 1) ಸನ್ 2025-26 ನೇ ಸಾಲಿನ 15ನೇ ಹಣಕಾಸು ಆಯೋಗದ ಅನುದಾನದಲ್ಲಿನ 01 ಕಾಮಗಾರಿ, 2) ಸನ್ 2025-26 ನೇ ಸಾಲಿನ ಎಸ್ ಎಫ್ ಸಿ, ಎಸ್ ಸಿ ಎಸ್ ಪಿ ಯೋಜನೆಯ ಅನುದಾನದಲ್ಲಿನ 01 ಕಾಮಗಾರಿ, 3) ಸನ್ 2025-26 ನೇ ಸಾಲಿನ ಮಹಾನಗರ ಪಾಲಿಕೆಯ ಅನುದಾನದಲ್ಲಿನ 03 ಕಾಮಗಾರಿಗಳು ಮತ್ತು 4) Census ಅನುದಾನದಲ್ಲಿನ 01 ಕಾಮಗಾರಿ ಟೆಂಡರ್ ಕೆ.ಪಿ.ಡಬ್ಲ್ಯೂ.ಡಿ ಇವರಿಂದ ನೋಂದಾಯಿತ ಗುತ್ತಿಗೆದಾರರಿಂದ ಕೆ.ಪಿ.ಪಿ ಪೋರ್ಟಲ್ ಸ್ಟ್ಯಾಂಡರ್ಡ ಟೆಂಡರ್ ಡಾಕ್ಯೂಮೆಂಟ್ ಮುಖಾಂತರ ಐಟಂವಾರು ಟೆಂಡರ್‌ನ್ನು ಆಹ್ವಾನಿಸಲಾಗಿದೆ. ಹೆಚ್ಚಿನ ವಿವರಗಳಿಗೆ ಆನ್‌ಲೈನ್ ಮೂಲಕ ವೆಬ್‌ಸೈಟ್ (https://kppp.karnataka.gov.in) ನಲ್ಲಿ ಪ್ರಕಟಿಸಲಾಗಿದೆ.

ಸೂಚನೆ: 1) ಟೆಂಡರ್ ತಿದ್ದುಪಡಿ ಹಾಗೂ ದಿನಾಂಕ ವಿಸ್ತರಣೆ kppp.karnataka.gov.in ಪೋರ್ಟಲ್‌ನಲ್ಲಿ ಮಾತ್ರ ನಮೂದಿಸಲಾಗುವುದು. 2) ಆನ್‌ಲೈನ್ ಮೂಲಕ ಟೆಂಡರ್ ಸಲ್ಲಿಸುವ ಕೊನೆಯ **ದಿನಾಂಕ: 04.04.2026**

**ಸಹಿ/- ಕಾರ್ಯಪಾಲಕ ಅಭಿಯಂತರರು,**
**ಮಹಾನಗರ ಪಾಲಿಕೆ, ವಿಜಯಪುರ**

ವಾಸಾಸಂಇ/ವಿಜಯಪುರ/840/ಕೆಎಸ್ಎಂಸಿಎ/2025-26

## ಪರೀಕ್ಷಾರ್ಥಿಗಳಿಗೆ ಆತ್ಮವಿಶ್ವಾಸ ತುಂಬಿದ ಜಿಪಂ ಸಿಇಓ ರಿಷಿ ಆನಂದ

■ ಉದಯರಶ್ಮಿ ದಿನಪತ್ರಿಕೆ



**ಎಸ್‌ಎಸ್‌ಎಲ್‌ಸಿ ಪರೀಕ್ಷಾ ಕೇಂದ್ರ, ವೆಬ್ ಕಾಸ್ಟಿಂಗ್ ಕೇಂದ್ರಗಳ ಸೂಕ್ಷ್ಮ ಪರಿಶೀಲನೆ, ಪ್ರೇರಣಾದಾಯಕ ಭೇಟಿ**

ವಿಜಯಪುರ: ಬುಧವಾರ ನಡೆದ ಎಸ್-ಎಸ್‌ಎಲ್‌ಸಿ ಪರೀಕ್ಷಾ ಕೇಂದ್ರಗಳಿಗೆ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಿಷಿ ಆನಂದ ಅವರು ಭೇಟಿ ನೀಡಿ ಪರೀಕ್ಷಾರ್ಥಿಗಳಿಗೆ ಆತ್ಮವಿಶ್ವಾಸ ತುಂಬಿದರು.

ತಾಲೂಕಿನ ಹಿಟ್ಟಿನಹಳ್ಳಿ ಶ್ರೀ ಶಿವಮೂರ್ತಿ ಸ್ವಾಮಿ ಚರಂತಿಮಠ ಪ್ರೌಢ ಶಾಲೆ ಹಾಗೂ ನಗರದ ಲೋಯೋಲಾ ಆಂಗ್ಲ ಮಾಧ್ಯಮ ಪ್ರೌಢ ಶಾಲೆ ಹಾಗೂ ವಿಕಾಸ್ ಪ್ರೌಢ ಶಾಲೆಗಳಿಗೆ ಭೇಟಿ ನೀಡಿ, ಪರೀಕ್ಷಾ ಪರೀಕ್ಷಾ ವ್ಯವಸ್ಥೆಯ ಸಮಗ್ರ ಪರಿಶೀಲನೆ ನಡೆಸಿದರು.

ವಿದ್ಯಾರ್ಥಿಗಳೊಂದಿಗೆ ಸ್ನೇಹಪೂರ್ಣವಾಗಿ ಮಾತನಾಡಿದ ಅವರು, ಯಾವುದೇ ರೀತಿಯ ಆತಂಕ ಪಡದೆ ಆತ್ಮವಿಶ್ವಾಸದಿಂದ ಪರೀಕ್ಷೆ ಬರೆಯುವಂತೆ ಪ್ರೇರೇಪಿಸಿದರು. ನಿಮ್ಮ ಪರಿಶ್ರಮವೇ ನಿಮ್ಮ ಯಶಸ್ಸಿನ ಮೂಲ, ಧೈರ್ಯದಿಂದ ಪರೀಕ್ಷೆಯನ್ನು ಎದುರಿಸಿರಿ ಎಂದು ವಿದ್ಯಾರ್ಥಿಗಳಿಗೆ ಹು-ರಿದುಂಬಿಸಿದರು. ಈ ಮಾತುಗಳು ವಿದ್ಯಾರ್ಥಿಗಳಲ್ಲಿ ಹೊಸ ಉತ್ಸಾಹವನ್ನು ತುಂಬಿದವು

ಬಳಿಕ ಕೇಂದ್ರಗಳಲ್ಲಿ ಅಳವಡಿಸಿರುವ ಸಿಸಿಟಿವಿ ಕ್ಯಾಮರಾ, ಭದ್ರತಾ ವ್ಯವಸ್ಥೆಗಳು, ಪ್ರಶ್ನೆಪತ್ರಿಕೆ ವಿತರಣೆ ಕ್ರಮ, ಪರೀಕ್ಷಾ ಮೇಲ್ವಿಚಾರಣೆ, ಪ್ರಥಮ ಚಿಕಿತ್ಸಾ ವ್ಯವಸ್ಥೆ ಹಾಗೂ ಕುಡಿಯುವ ನೀರು ಸೇರಿದಂತೆ ಪ್ರತಿಯೊಂದು ಹಂತವನ್ನು ಸೂಕ್ಷ್ಮವಾಗಿ ಪರಿಶೀಲಿಸಿದರು.

ಪರೀಕ್ಷಾ ಮೇಲ್ವಿಚಾರಕರು ತಮ್ಮ ಕರ್ತವ್ಯವನ್ನು ಸಮರ್ಪಕವಾಗಿ ನಿರ್ವಹಿಸುತ್ತಿರುವುದನ್ನು ಪರಿಶೀಲಿಸಿ, ಯಾವುದೇ ಅಕ್ರಮಗಳಿಗೆ ಅವಕಾಶವಿಲ್ಲದಂತೆ ಕಟ್ಟುನಿಟ್ಟಿನ ಕ್ರಮಗಳನ್ನು ಅನುಸರಿಸಲು ಸೂಚಿಸಿದರು.


ನಂತರ, ಸಿಇಓ ಅವರು ಪರೀಕ್ಷೆಗಳ ಮೇಲ್ವಿಚಾರಣೆಗಾಗಿ ಜಿಲ್ಲಾ ಪಂಚಾಯತಿಯ ಮಿನಿ ಸಭಾಂಗಣದಲ್ಲಿ ಸ್ಥಾಪಿಸಲಾಗಿರುವ ವೆಬ್ ಕಾಸ್ಟಿಂಗ್ ಕೇಂದ್ರಕ್ಕೆ ಭೇಟಿ ನೀಡಿ, ಜಿಲ್ಲೆಯ ವಿವಿಧ ಪರೀಕ್ಷಾ ಕೇಂದ್ರಗಳಲ್ಲಿ ನಡೆಯುತ್ತಿರುವ ಪರೀಕ್ಷಾ ಪ್ರಕ್ರಿಯೆಯನ್ನು ಲೈವ್ ಪ್ರಸಾರದ ಮೂಲಕ ವೀಕ್ಷಿಸಿ, ಪ್ರತಿಯೊಂದು ಕೇಂದ್ರದಲ್ಲಿಯೂ ಶಿಸ್ತು ಮತ್ತು ನಿಯಮ ಪಾಲನೆಯು ಸಮರ್ಪಕವಾಗಿ ನಡೆಯುತ್ತಿರುವುದನ್ನು ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ ಜಿಲ್ಲಾ ನೋಡೆಲ್ ಅಧಿಕಾರಿಗಳಾದ ಟಿ. ಎಸ್. ಕೊಲ್ಹಾರ, ವೆಬ್ ಕಾಸ್ಟಿಂಗ್ ಕೇಂದ್ರದ ಮುಖ್ಯಸ್ಥರಾದ ರೇಣುಕಾ ಕಲಬುರ್ಗಿ, ಜಿಲ್ಲೆಯ ಎಲ್ಲಾ ವಲಯಗಳ ಮುಖ್ಯಸ್ಥರು ಹಾಗೂ ಪರೀಕ್ಷಾ ವೆಬ್ ಕಾಸ್ಟಿಂಗ್ ವೀಕ್ಷಕರು, ಪರೀಕ್ಷಾ ಕೇಂದ್ರಗಳ ಮೇಲ್ವಿಚಾರಕರು, ಪೋಲಿಸ್ ಸಿಬ್ಬಂದಿ, ಆರೋಗ್ಯ ಕಾರ್ಯಕರ್ತರು ಹಾಗೂ ಇತರೆ ಸಿಬ್ಬಂದಿಯವರು ಉಪಸ್ಥಿತರಿದ್ದರು.

# ನಿಮ್ಮ ಸಂಕಲ್ಪ ವಜ್ರದ ಹಾಗಿದ್ದರೆ..

**ಜಯ್ ನುಡಿ**
**(ವ್ಯಕ್ತಿತ್ವ ವಿಕಸನ ಕುರಿತ ಲೇಖನ ಮಾಲಿಕೆ)**

■ ಉದಯರಶ್ಮಿ ದಿನಪತ್ರಿಕೆ





ಸಾವಿರ ಹೆಜ್ಜೆಗಳ ಪಯಣ ಮೊದಲ ಹೆಜ್ಜೆಯಲ್ಲಿ ಶುರುವಾಗುತ್ತದೆ. ಅಂತೆಯೇ ಯಾವುದರಲ್ಲೇ ಆಗಲಿ ಗೆಲುವು ಪಡೆಯುವದರ ಮೂಲಮಂತ್ರ ಎಂದರೆ ಸಂಕಲ್ಪ. ಮಂತ್ರಕ್ಕೆ ಮಾವಿನಕಾಯಿ ಉದುರುವುದಿಲ್ಲ ಎನ್ನುವ ಮಾತೊಂದಿದೆ. ರಸಭರಿತ ಮಾವುಗಳು ಕಣ್ಣಿಗೆ ಬಿದ್ದ ತಕ್ಷಣ ಮನಸ್ಸು ತಿನ್ನುವ ಬಯಕೆಯನ್ನು ವ್ಯಕ್ತಪಡಿಸುತ್ತದೆ. ಹಾಗಂತ ಮಾವಿನ ಮರದ ಕೆಳಗೆ ಬಾಯಿ ತೆರೆದು ನಿಂತರೆ ಮಾವಿನ ಹಣ್ಣು ಬಾಯಿಗೆ ಬಂದು ಬೀಳುವುದಿಲ್ಲ. ಮರ ಏರಲೇಬೇಕು. ಅದರ ಹಣ್ಣುಗಳನ್ನು ಕಿತ್ತು ಸವಿಯಬೇಕು. ಇದರರ್ಥ ಹಣ್ಣು ಬೇಕೆಂದವನು ಮರವನ್ನು ಏರಲೇಬೇಕು.

**ಮರ ಏರಬೇಕು**

ಲಾಲ್ ಬಹದ್ದೂರ ಶಾಸ್ತ್ರೀಯವರ ಜೀವನದಲ್ಲಿ ನಡೆದ ಒಂದು ಘಟನೆಯನ್ನು ತಮ್ಮ ಮುಂದೆ ಹೇಳಲೇಬೇಕು. ಅವರು ಚಿಕ್ಕವರಿದ್ದಾಗ ಗೆಳೆಯರೆಲ್ಲ ಕೂಡಿ ಮಾವಿನ ತೋಟಕ್ಕೆ ಲಗ್ಗೆಯಿಟ್ಟು ಹಣ್ಣನ್ನು ಸವಿಯಲು ನಿರ್ಧರಿಸಿದರು. ಅದರಂತೆ ತೋಟಕ್ಕೆ ನುಗ್ಗಿ ಹಣ್ಣನ್ನು ಕೀಳುತ್ತಿರುವಾಗ ತೋಟದ ಮಾಲಿಯು ಬಂದದ್ದು ಗೊತ್ತಾಗಿ ಎಲ್ಲ ಹುಡುಗರು ಕಾಲಿಗೆ ಬುದ್ಧಿ ಹೇಳಿದರು. ಆದರೆ ಬಾಲಕ ಶಾಸ್ತ್ರೀ ಮಾತ್ರ ಅಲ್ಲೇ ನಿಂತಿದ್ದ. ಬಾಲಕನನ್ನು ಮಾಲಿ ಬೈಯ್ಯತೊಡಗಿದ. ಬಾಲಕ ಮಾತ್ರ ಹೆದರಲಿಲ್ಲ. ಮಾಡಿದ ತಪ್ಪನ್ನು ಒಪ್ಪಿಕೊಂಡ. ಮಾಲಿ ಬಂದನೆಂದು ಇತರರಂತೆ ಓಡದೇ ಸಂಕಲ್ಪ ಶಕ್ತಿಯಿಂದ ಹಿಂದೆ ಸರಿಯಲಿಲ್ಲ. ತೋಟದಲ್ಲಿ ಹಾಗೆ ನುಗ್ಗಿ ತಿನ್ನುವುದು ತಪ್ಪು ಎಂಬುದು ಅವರಿಗೆ ಗೊತ್ತಿರಲಿಲ್ಲ. ಆದರೆ ಗೊತ್ತಾದ ಮೇಲೆ ಆ ತಪ್ಪನ್ನೆಂದೂ ಮರಳಿ ಮಾಡಲಿಲ್ಲ. ಇದು ಅವರಲ್ಲಿಯ ಸಂಕಲ್ಪ ಶಕ್ತಿಯನ್ನು ಎತ್ತಿ ತೋರಿಸುತ್ತದೆ.

ಸಂಕಲ್ಪ ಎಂದರೇನು?

ಸಂಕಲ್ಪ ಎನ್ನುವುದು ಸಂಸ್ಕೃತ ಶಬ್ದ. ಅಂದರೆ ದೃಢ ನಿರ್ಧಾರ ತೆಗೆದುಕೊಳ್ಳುವುದು ಎಂದರ್ಥ. ಈ ನಿರ್ಧಾರ ಅಥವಾ ನಿರ್ಣಯ ಸಂಪೂರ್ಣ ಮನಸ್ಸಿನದಾಗಿರುತ್ತದೆ. ಇನ್ನೂ ಮುಂದುವರೆದು ಹೇಳಬೇಕೆಂದರೆ ಮುಂಬರುವ ಜೀವನದ ಬಗ್ಗೆ ಈಗಲೇ ಕೈಗೊಳ್ಳುವ ನಿರ್ಧಾರ.

**ಯಾವಾಗ ಕೈಗೊಳ್ಳುತ್ತೇವೆ?**

ಸಾಮಾನ್ಯವಾಗಿ ಶುಭಕಾರ್ಯ ಮಾಡುವಾಗ ದೇವರ ಮುಂದೆ ನಿಂತು ಸಂಕಲ್ಪ ಮಾಡುವ ಕ್ರಮವನ್ನು ನೋಡಿರುತ್ತೇವೆ. ಮುಂಜಾನೆ ಬೇಗ ಏಳುತ್ತೇನೆ. ವಾಕಿಂಗ್ ಹೋಗುತ್ತೇನೆ. ತೂಕ ಇಳಿಸುತ್ತೇನೆ. ಅಂದಿನ ಅಭ್ಯಾಸ ಅಂದೇ ಮುಗಿಸುತ್ತೇನೆ. ಹಣ ಗಳಿಸುತ್ತೇನೆ. ಚಟ ಬಿಡುತ್ತೇನೆ ಇತ್ಯಾದಿ. ನಾವು ಈ ಸಂಕಲ್ಪಗಳನ್ನು ಹೊಸ ವರ್ಷದ ಸಂದರ್ಭದಲ್ಲಿ ತೆಗೆದುಕೊಳ್ಳುತ್ತೇವೆ. ಹೆಚ್ಚಾಗಿ ಹೊಸ ವರ್ಷದ ದಿನದಿಂದ ಪ್ರಾರಂಭಿಸಬೇಕೆಂದು ಅಂದುಕೊಳ್ಳುತ್ತೇವೆ.

ಚಿಕ್ಕ ಯೋಜನೆ

ಈ ವರ್ಷ ಹಾಗೆ ಮಾಡುತ್ತೇನೆ ಹೀಗೆ ಮಾಡುತ್ತೇನೆಂಬ ಉದ್ದನೆಯ ಪಟ್ಟಿ ನಮ್ಮದು. ಅದನ್ನು ದೇವರ ಮುಂದಿಟ್ಟು ಇವೆಲ್ಲ ನಿರ್ವಿಘ್ನವಾಗಿ ನಡೆಯಬೇಕು





ಎನ್ನುವ ಇಚ್ಛೆ ಬೇರೆ. ಯಾವುದೇ ವಿಘ್ನಗಳು ಬಾರದೇ ಸುಸೂತ್ರವಾಗಿ ಸಾಗುವಂತೆ ಮಾಡು ತಂದೆ ಎಂದು ಎರಡು ಕೈ ಜೋಡಿಸಿ ಭಕ್ತಿಯಿಂದ ಬೇಡುತ್ತೇವೆ. ಒಂದು ವಾರದಲ್ಲಿ ಪಟ್ಟಿಯಲ್ಲಿ ಕೆಲವೇ ಕೆಲವು ಉಳಿದುಕೊಳ್ಳುತ್ತವೆ. ಒಂದು ತಿಂಗಳು ಬಿಟ್ಟು ನೋಡಿದರೆ ಮತ್ತೆ ಅದೇ ರಾಗ ಅದೇ ಹಾಡು. ಹಾಗಾಗಬಾರದೆಂದರೆ ಸಂಕಲ್ಪವನ್ನು ನಿತ್ಯ ಹೇಗೆ ಗುರಿಯತ್ತ ಸಾಗುವಿರಿ ಎಂಬುದಕ್ಕೆ ಚಿಕ್ಕದಾದ ಯೋಜನೆ ತಯಾರಿಸಿಕೊಳ್ಳಿ ಅದರಂತೆ ಹೆಜ್ಜೆ ಇಡಿ.

**ತ್ರಿವಿಕ್ರಮನ ಛಲ**

ಹೀಗೇಕೆ ಹೇಳುತ್ತೇನೆಂದರೆ ಸಂಕಲ್ಪ ಮಾಡಿಕೊಂಡ ಮಾತ್ರಕ್ಕೆ ಅಂದುಕೊಂಡದ್ದು ಆಗಿಬಿಡುವುದಿಲ್ಲ. ಮನಸ್ಸಿನ ನಿರ್ಧಾರ ಜತೆಗೆ ದೈಹಿಕ ಪ್ರಯತ್ನವೂ ಕೈ ಜೋಡಿಸಿದಾಗ ಮಾತ್ರ ಸಂಕಲ್ಪ ಕೈಗೂಡುತ್ತದೆ. ಮನಸ್ಸಿನಲ್ಲಿ ಮಂಡಿಗೆ ತಿಂದರೆ ಪ್ರಯೋಜನವಿಲ್ಲ. ಅಂದುಕೊಂಡಿದ್ದನ್ನು ಸಾಧಿಸಲು ಪ್ರಯತ್ನ ಪಡಲೇಬೇಕು ಬೇರೆ ದಾರಿಯಿಲ್ಲ. ನಮ್ಮ ತಪ್ಪು ಹೆಜ್ಜೆಗಳನ್ನು ಮನಸ್ಸು ಗುರುತಿಸಿ ಪಿಸುಗುಟ್ಟುತ್ತಿರುತ್ತದೆ. ಅದರ ಮಾತಿಗೆ ನಾವು ಕಿವಿಗೊಡುವುದೇ ಇಲ್ಲ. ಕಿವಿಗೊಟ್ಟರೂ ಅದರತ್ತ ಚಿತ್ತ ಹರಿಯುವುದೇ ಇಲ್ಲ. ಆಂತರ್ಯದ ದನಿಗೆ ಕಿವಿಯಾಗಬೇಕು. ಹಾಗಾದಾಗ ಮಾತ್ರ ಸಂಕಲ್ಪ ಈಡೇರುತ್ತದೆ. ಸಂಕಲ್ಪದಲ್ಲಿ ನಿರ್ದಿಷ್ಟತೆ ಸ್ಪಷ್ಟತೆ ಇರುತ್ತದೆ. ಮತ್ತು ಇದು ಸ್ಥಿರತೆಯನ್ನು ಬೇಡುತ್ತದೆ. ಸ್ಥಿರತೆ ಇರದಿದ್ದರೆ ಸಂಕಲ್ಪ ಕೈಕೊಡುವುದು ಖಚಿತ ಎನ್ನುವುದನ್ನು ಮರೆಯುವಂತಿಲ್ಲ. ತ್ರಿವಿಕ್ರಮನ ಛಲವಿದ್ದರೆ ಮಾತ್ರ ಸಂಕಲ್ಪದ ಬೆಳಕು ಹೊರಚೆಲ್ಲುವುದು.

**ನಿರಂತರ ಶ್ರಮ**

ಸತತ ಪ್ರಯತ್ನ ಸಾಧಕನ ಮಂತ್ರ ಪ್ರತಿದಿನ ಸಣ್ಣ ಹೆಜ್ಜೆ ಇಡುತ್ತ ಸಾಗಿದರೆ ದೊಡ್ಡ ಸಂಕಲ್ಪವನ್ನೂ ವಾಸ್ತವಕ್ಕೆ ತರಬಲ್ಲೆವು. ಸಂಕಲ್ಪದಿಂದ ಸಕಲವೂ ಸಾಧ್ಯ. ಅಸಾಧ್ಯವೂ ಸಾಧ್ಯ. ಸಂಕಲ್ಪ ಶಕ್ತಿಯನ್ನು ಚಾಲಕ ಶಕ್ತಿಯಾಗಿ ಪರಿಗಣಿಸಬಬಹುದು. ಅಂದ ಹಾಗೆ ಸಂಕಲ್ಪಕ್ಕೆ ಕೇವಲ ಬಯಕೆ ಇದ್ದರೆ ಸಾಲದು ಅದರ ಜತೆಗೆ ಪ್ರಯತ್ನವೂ ಬೇಕು. ಬೇಕಾಗಿದ್ದನ್ನು ಪಡೆದುಕೊಳ್ಳುವ ನಿಟ್ಟಿನಲ್ಲಿ ಸಾಗುವ ದಾರಿ ಎಷ್ಟೇ ದುರ್ಗಮವಾಗಿದ್ದರೂ ಹಿಂದೇಟು ಹಾಕುವಂತಿಲ್ಲ. ಆ ದೃಢ ನಿರ್ಧಾರವೇ ಸಂಕಲ್ಪ ಶಕ್ತಿಯಾಗಿ ಗುರಿ ಮುಟ್ಟುವತನಕ ಕೈ ಬಿಡದೇ ನಡೆಸುವುದು. ಸಂಕಲ್ಪ ಎನ್ನುವುದು ಮಾನಸಿಕವಾಗಿದ್ದರೂ ಅದು ದೈಹಿಕ ಶ್ರಮವನ್ನು ಬಯಸುತ್ತದೆ. ಈಜು ಕಲಿಯಬೇಕೆನ್ನುವನು ಕೆರೆಯ ದಂಡೆಯ ಮೇಲೆ ನಿಂತು ನೋಡಿದರೆ ಈಜು ಬಾರದು. ನೀರಿಗೆ ಇಳಿಯಲೇಬೇಕು ಕೈಕಾಲು ಬಡಿಯಲೇಬೇಕು. ನೀರಿಗಿಳಿದು ಕೈಕಾಲು ಬಡಿಯದಿದ್ದರೆ ಕ್ರಮಿಸಬೇಕಿದ್ದ ದೂರದ ಪಯಣ ಅಲ್ಲೇ ನಿಂತು ಹೋಗುತ್ತದೆ. ಸಂಕಲ್ಪಕ್ಕೆ ಇತಿಶ್ರೀ ಹಾಡಿದಂತಾಗುತ್ತದೆ.

**ಮುನ್ನುಗ್ಗಬೇಕು**

ಸ್ಪರ್ಧಾತ್ಮಕ ಪರೀಕ್ಷೆ ಎದುರಿಸಿ ನೌಕರಿ ಪಡೆಯಬೇಕೆನ್ನುವ ವಿದ್ಯಾರ್ಥಿ ಓದದೇ ದೇವ-ರಿಗೆ ಬೇಡಿಕೊಳ್ಳುತ್ತಿದ್ದರೆ ಅವನ ಆಸೆ ಈಡೇರದು. ಇದನ್ನೇ ಸರಳವಾಗಿ ಹೇಳಬೇಕೆಂದರೆ ಭಯಪಟ್ಟರೆ ಬಯಸಿದ್ದು ಸಿಗುವುದಿಲ್ಲ. ಕೇವಲ ಸಂಕಲ್ಪ ಮಾಡಿಕೊಂಡರೆ ಸಾಲದು. ಅದರ ಹಿಂದೆ ಪ್ರಯತ್ನವೆಂಬ ಅಸ್ತ್ರ ಹಿಡಿದು ಮುನ್ನುಗ್ಗಬೇಕು. ಸಂಕಲ್ಪ ದೃಢವಾಗಿದ್ದರೆ ಅವಕಾಶಗಳು ಮನೆ ಬಾಗಿಲಿಗೆ ನಿಮ್ಮನ್ನು ಹುಡುಕಿಕೊಂಡು ಬರುತ್ತವೆ.

ಕೊನೆ ಹನಿ

ಸಾಧನೆ ಮಾಡಲು ಇದೇ ಮಾಡಬೇಕೆಂದೇನೂ ಇಲ್ಲ. ಮನವು ಉಲ್ಲಾಸದಿಂದ ಮಾಡುವ ಕೆಲಸದಲ್ಲಿ ತೊಡಗುವಂತೆ ಮಾಡಬೇಕು. ಉತ್ತಮ ಹವ್ಯಾಸಗಳನ್ನು ಬಿಟ್ಟೂಬಿಡದೆ ಅಚ್ಚುಕಟ್ಟಾಗಿ ನಿರ್ವಹಿಸಬೇಕು. ಆಗ ಅದು ಎಲ್ಲರ ಗಮನ ಸೆಳೆಯುತ್ತದೆ. ಗೆಲುವಿಗೆ ಮುನ್ನುಡಿ ಬರೆಯುತ್ತದೆ. ಬರಬರುತ್ತ ಹೆಸರು ತಂದುಕೊಡುತ್ತದೆ. ಅನೇಕ ರಂಧ್ರಗಳಿಂದ ಕೂಡಿರುವ ಕೊಳಕನ್ನು ಜಾಣ್ಮೆಯಿಂದ ಬಳಸಿದರೆ ಮಧುರ ನಾದ ಹೊರಡಿಸಲು ಸಾಧ್ಯ. ಮನಸ್ಸು ಸಹ ಅಷ್ಟೇ. ಹಿಡಿತಕ್ಕೆ ತೆಗೆದುಕೊಂಡರೆ ಸಂಕಲ್ಪ ಸಿದ್ಧಿಯಾಗುವುದು. ಕೆಲವೊಮ್ಮೆ ಹೋಗುವ ದಾರಿ ಹಿಡಿಸದೇ ಇರಬಹುದು. ಮಾಡುವ ಕಾರ್ಯ ಮನಸ್ಸಿಗೆ ಕಷ್ಟ ಅನ್ನಿಸಬಹುದು. ನೀವು ಮಾಡಿದ ಸಂಕಲ್ಪ ವಜ್ರದ ಹಾಗಿದ್ದರೆ ಆಕಾಶಕ್ಕೆ ಏಣಿಯನ್ನು ಹಾಕಬಹುದು. ಕಡಲಾಳದಲ್ಲಿರುವ ಮುತ್ತು ರತ್ನಗಳನ್ನು ಹೆಕ್ಕಿ ತರಬಹುದು. ಹಾಗಾದರೆ ತಡವೇಕೆ ಸಂಕಲ್ಪ ಗಟ್ಟಿಯಾಗಿಸೋಣವಲ್ಲವೇ?

ಲೇಖನ
■ ಜಯಶ್ರೀ.ಜೆ. ಅಬ್ಬಿಗೇರಿ
ಇಂಗ್ಲೀಷ್ ಉಪನ್ಯಾಸಕರು
ಬೆಳಗಾವಿ 9449234142




## ಸೇತುವೆ ಕಾರ್ಯದಿಂದಾಗಿ ಮಾರ್ಗ ಬದಲಾವಣೆ

■ ಉದಯರಶ್ಮಿ ದಿನಪತ್ರಿಕೆ

ಇಂಡಿ: ಇಂಡಿಯಿಂದ ಕಲಬುರಗಿಗೆ ಹೋಗುವ ರಾಜ್ಯ ಕರ್ನಾಟಕ ರಾಜ್ಯ ಸಾರಿಗೆ ಬಸಗಳ ಮಾರ್ಗಗಳನ್ನು ಬದಲಾವಣೆ ಮಾಡಲಾಗಿದೆ ಎಂದು ಘಟಕ ವ್ಯವಸ್ಥಾಪಕ ರೇವಣಸಿದ್ಧ ಖೈನೂರ ತಿಳಿಸಿದ್ದಾರೆ. ಆಲಮೇಲದಿಂದ ಅಫರ್ಝಲಪೂರಕ್ಕೆ ಹೋಗುವ ಮಾರ್ಗದಲ್ಲಿ ದೇವಣಗಾಂವ ಬ್ರೀಡ್ಜ ಕಾರ್ಯ ನಡೆದ ನಿಮಿತ್ಯ ಈ ಕ್ರಮ ಕೈಕೊಳ್ಳಲಾಗಿದೆ.

ಇಂಡಿಯಿಂದ ಕಲಬುರಗಿಗೆ ಹೋಗುವ ಬಸ್ಸುಗಳು ಉಡಚಾಣ ಮಾರ್ಗವಾಗಿ ಅಫಝುಲಪೂರಕ್ಕೆ ಹೋಗುವವು ಆದರೆ ದರದಲ್ಲಿ ಯಾವದೇ ಬದಲಾವಣೆ ಇರುವದಿಲ್ಲ ಎಂದು ಖೈನೂರ ತಿಳಿಸಿದ್ದಾರೆ.

## ಕ್ರೀಡೆಯಿಂದ ಶಿಸ್ತು ಮತ್ತು ನಾಯಕತ್ವ ಗುಣ ಅಭಿವೃದ್ಧಿ



**ಯಶೋಧಾ ಚೈತ್ರೋತ್ಸವ-2026 ಕ್ರೀಡೋತ್ಸವ ಉದ್ಘಾಟನೆಯಲ್ಲಿ ಡಾ. ರವೀಂದ್ರ ಮದ್ರಕಿ ಅಭಿಮತ**

ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕ್ರೀಡೆಗಳು ವಿದ್ಯಾರ್ಥಿಗಳ ದೈಹಿಕ ಹಾಗೂ ಮಾನಸಿಕ ಬೆಳವಣಿಗೆಗೆ ಅತ್ಯಂತ ಮುಖ್ಯ ಎಂದು ಯಶೋಧಾ ಆಸ್ಪತ್ರೆಯ ಮುಖ್ಯಸ್ಥರಾದ ಡಾ.ರವೀಂದ್ರ ಮದ್ರಕಿ ಹೇಳಿದರು.

ಯಶೋಧಾ ಗ್ರೂಪ್ ಆಫ್ ಇನ್‌ಸ್ಟಿಟ್ಯೂಷನ್‌ಗಳ ವತಿಯಿಂದ ಆಯೋಜಿಸಲಾದ ಯಶೋಧಾ ಚೈತ್ರೋತ್ಸವ–2026 ಕ್ರೀಡೋತ್ಸವದ ಉದ್ಘಾಟನಾ ಸಮಾರಂಭದ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು, ನಿಯಮಿತವಾಗಿ ಕ್ರೀಡೆಗಳಲ್ಲಿ ಭಾಗವಹಿಸುವುದರಿಂದ ಶಿಸ್ತು, ಸಹಕಾರ ಮತ್ತು ನಾಯಕತ್ವ ಗುಣಗಳನ್ನು ಅಭಿವೃದ್ಧಿಯಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಗೌರವ ಅತಿಥಿಯಾದ ಡಾ.ಕಮಲಾ ಮದ್ರಕಿ ಮಾತನಾಡಿ, ವಿದ್ಯಾರ್ಥಿಗಳು ಪಾಠಗಳ ಜೊತೆಗೆ ಕ್ರೀಡೆಗಳಲ್ಲಿಯೂ ತೊಡಗಿಸಿಕೊಂಡು ಸಮಗ್ರ ವ್ಯಕ್ತಿತ್ವವನ್ನು ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ನಿವೃತ್ತ ದೈಹಿಕ ಶಿಕ್ಷಣ ನಿರ್ದೇಶಕರಾದ ಡಾ.ಅಶೋಕಕುಮಾರ ರಾ.ಜಾಧವ ಮಾತನಾಡಿ, ಕ್ರೀಡೆಗಳು ಆರೋಗ್ಯಕರ ಜೀವನಕ್ಕೆ ಮಾರ್ಗದರ್ಶಕವಾಗಿದ್ದು, ಪ್ರತಿಯೊಬ್ಬ ವಿದ್ಯಾರ್ಥಿಯೂ ಕ್ರೀಡೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಆಡಳಿತಾಧಿಕಾರಿ ಪ್ರೊ.ರಮೇಶ್ ಚೌಧರಿ, ಪ್ರಾಂಶುಪಾಲರಾದ ಪ್ರೊ. ಗುರುಶಾಂತ್.

ಪಿ ಹಾಗೂ ನರ್ಸಿಂಗ್ ಸಲಹೆಗಾರರಾದ ವೈ.ವೈ.ಕಡಗಬಾವಿ, ವಿಜಯಕುಮಾರ ಚವ್ಹಾಣ, ಚಾಂದವಸೀಮ ಮುಕಾದಮ ಭಾರತ ಸೇವಾದಳದ ಜಿಲ್ಲಾ ಸಂಚಾಲಕರಾದ ನಾಗೇಶ ಡೋಣುರ ಮತ್ತು ಬಂಜಾರ ಶಾಲೆಯ ದೈಹಿಕ ಶಿಕ್ಷಕ ಸೋಮಶೇಖರ ರಾಠೋಡ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಯಶೋಧಾ ಗ್ರೂಪ್ ಆಫ್ ಇನ್‌ಸ್ಟಿಟ್ಯೂಷನ್‌ಗಳ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕ್ರೀಡೋತ್ಸವಕ್ಕೆ ಉತ್ಸಾಹ ತುಂಬಿದರು.

## ಕಾಶಿಯಲ್ಲಿ ಅಮರ ಬಲಿದಾನ ದಿನಾಚರಣೆ


ಬೀದರ್:ಜೈ ಭಾರತ ಮಾತಾ ರಾಷ್ಟ್ರೀಯ ಸೇವಾ ಸಮಿತಿ ವತಿಯಿಂದ ಕಾಶಿ(ವಾರಾಣಸಿ)ಯ ಚೌಕಾಘಾನ ಅಲಾಮ್ ರಸ್ತೆಯಲ್ಲಿನ ಪದ್ಮವಿಭೂಷಣ ಗಿರಿಜಾದೇವಿ ಸಾಂಸ್ಕೃತಿಕ ಸಂಕೊಲ ಮಕಬೋಲದಲ್ಲಿ ಅಮರ ಬಲಿದಾನ ದಿನವನ್ನು ಸೋಮವಾರ ಅರ್ಥಪೂರ್ಣವಾಗಿ ಆಚರಿಸಲಾಯಿತು.

ದೇಶದ ಸ್ವಾತಂತ್ರ್ಯಕ್ಕಾಗಿ ಬಲಿದಾನ ನೀಡಿದ ಭಗವಸಿಂಗ್, ರಾಜಗುರು, ಸುಖದೇವ್, ಸಂಗೊಳ್ಳಿ ರಾಯಣ್ಣ ಮೊದಲಾದ ಮಹಾ ಪುರುಷರ ಕುಟುಂಬಗಳ ಸದಸ್ಯರನ್ನು ಗೌರವಿಸಲಾಯಿತು.

## ಆತ್ಮವಿಶ್ವಾಸ ಮತ್ತು ಧನಾತ್ಮಕ ಚಿಂತನೆಯಿಂದ ಭಯ ನಿವಾರಣೆ

### ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತು ರಾಜ್ಯಾಧ್ಯಕ್ಷ ಹುಲಿಕಲ್ ನಟರಾಜ ಅಭಿಮತ

■ ಉದಯರಶ್ಮಿ ದಿನಪತ್ರಿಕೆ



ಕಾಗವಾಡ: ತಾಲೂಕಿನ ಕವಲಗುಡ್ಡ ಹೊರ ವಲಯದಲ್ಲಿರುವ ಈಶ್ವರ್ ದುಂಡಪ್ಪ ತೆಗ್ಗಿನವರ ಇವರ ಮನೆಗೆ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತು ರಾಜ್ಯಾಧ್ಯಕ್ಷ ಹುಲಿಕಲ್ ನಟರಾಜ ಭೇಟಿ ನೀಡಿ ಪರಿಶೀಲಿಸಿದರು.

ತಗ್ಗಿನವರ ಮನೆಯಲ್ಲಿ ಕಳೆದ ಮೂರು ವರ್ಷಗಳಿಂದ ಆಕಸ್ಮಿಕ ಬೆಂಕಿ ಹೊತ್ತಿಕೊಳ್ಳುತ್ತಿತ್ತು. ಇದನ್ನು ಮನಗಂಡು ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತು ಭೇಟಿಮಾಡಿ ಮನೆಯವರೊಂದಿಗೆ ಸಂದರ್ಶಿಸಿದಾಗ ಅಲ್ಲಿ ಯಾವುದೇ ರೀತಿಯ ಭಾನಾಮತಿ ಹಾಗೂ ಮಾಟ ಮಂತ್ರ ಇರುವುದಿಲ್ಲ. ಆತ್ಮವಿಶ್ವಾಸದಿಂದ ಧನಾತ್ಮಕ ಚಿಂತನೆ ಮಾಡಿದರೆ ಯಾವುದೇ ಭಯ ಬೇಡ ಎಂದು ಮನೆಯವರಿಗೆ ಆತ್ಮಸ್ಥೈರ್ಯ ನೀಡಿ ಬಹು ವರ್ಷಗಳಿಂದ ಕಂಡು ಬಂದಿರುವ ಸಮಸ್ಯೆಗೆ ಪರಿಹಾರ ನೀಡಲಾಯಿತು.

ಈ ವೇಳೆ ಹುಲಿಕಲ್ ನಟರಾಜ ಮಾತನಾಡಿ, ಬಾನಾಮತಿ ಎಂಬುದು ಶತ್ರುಗಳಿಗೆ ಹಾನಿ ಮಾಡಲು ಅನಾರೋಗ್ಯತರಲು ಅಥವಾ ಕುಟುಂಬಗಳನ್ನು ಸರ್ವನಾಶ ಮಾಡಲು ನಡೆಸುವ ಕೆಟ್ಟ ಪ್ರಯೋಗ ಎಂಬ ಭಯ ಜನರಲ್ಲಿದೆ. ಇದರ ಭಯಕ್ಕೆ ಬಿದ್ದವರು ಮಾನಸಿಕವಾಗಿ ಕುಗ್ಗಿ ಹೋಗುತ್ತಾರೆ. ಅನೇಕರು ತಮಗಾದ ಕಾಯಿಲೆಗಳಿಗೆ ವೈದ್ಯಕೀಯ ಚಿಕಿತ್ಸೆ ಪಡೆಯುವ ಬದಲು ಇದು ಬಾನಾಮತಿ ಇರಬಹುದು ಎಂದು ಭಾವಿಸಿ ಮಾಟಗಾರರ ಮೊರೆ ಹೋಗುತ್ತಾರೆ. ಆದರೆ ಈ ಕುಟುಂಬಕ್ಕೆ ಕರ್ನಾಟಕ ಮೌಢ್ಯ ಪ್ರತಿಬಂಧಕ ಕಾಯ್ದೆಯ ಪ್ರಕಾರ ಇಂತಹ ಅನಿಷ್ಟ ಪದ್ಧತಿಗಳನ್ನು ಮತ್ತು ಬಾನಾಮತಿಯ ಹೆಸರಿನಲ್ಲಿ ನಡೆಯುವ ಅಮಾನವೀಯ ಕೃತ್ಯಗಳನ್ನು ತಿಳಿ ಹೇಳಬೇಕು ಹಾಗೂ ಇಂತಹ ಅನಿಷ್ಟ ಪದ್ದತಿಗಳನ್ನು ನಿಷೇಧಿಸುವಂತೆ ಕರೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಸಂಗಮೇಶ ಹಚಡದ, ಅಥಣಿ ತಾಲೂಕಾ ಘಟಕದ ಮಹಿಳಾ ಅಧ್ಯಕ್ಷೆ ಕು. ಸಾನಿಯಾ ಮಕಾನದಾರ, ಉಪಾಧ್ಯಕ್ಷ ಅಣ್ಣಪ್ಪ ಸವದಿ, ಕಾಗವಾಡ ತಾಲೂಕಾಧ್ಯಕ್ಷ ದಾದಾಸೋ ಸಾವಂತ ಸೇ-ರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ದೇವರ ದಾಸಿಮಯ್ಯ ವಚನ ಸಾಹಿತ್ಯದ ಆದ್ಯ ಪ್ರವರ್ತಕ:ಚಂದ್ರಕಾಂತ ಪೂಜಾರಿ




ಬೀದರ: ದಾಸಿಮಯ್ಯನವರು ಕನ್ನಡದ ಮೊದಲ ವಚನಕಾರರಲ್ಲಿ ಒಬ್ಬರು ಇವರನ್ನು ವಚನ ಸಾಹಿತ್ಯದ 'ಆದ್ಯ ವಚನಕಾರ ಎಂದು ಕರೆಯಲಾಗುತ್ತದೆಂದು ಹೆಚ್ಚುವರಿ ಪೊಲೀಸ್ ವರೀಷ್ಠಾಧಿಕಾರಿ ಚಂದ್ರಕಾಂತ ಪೂಜಾರಿ ಹೇಳಿದರು.

ಅವರು. ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೀದರ ಇವರ ಸಂಯುಕ್ತಾಶ್ರಯದಲ್ಲಿ ನಗರದ ಪೂಜ್ಯ ಡಾ. ಚನ್ನಬಸವ ಪಟ್ಟದೇವರ ರಂಗಮಂದಿರದಲ್ಲಿ ಆಯೋಜಿಸಿದ ದೇವರ ದಾಸಿಮಯ್ಯ ಜಯಂತ್ಯೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಅಂದಿನ ಕಾಲದ ಜನರಲ್ಲಿ ಇದ್ದ ಮೂಢನಂಬಿಕೆಗಳನ್ನು ಮತ್ತು ಮೇಲು-ಕೀಳು ಎಂಬ ಭೇದಭಾವವನ್ನು ಇವರು ತಮ್ಮ ಸರಳವಾದ ಮಾತುಗಳ ಮೂಲಕ ತಿದ್ದಿದರು. "ದೇವರಿಗೆ ಜಾತಿ ಇಲ್ಲ, ಭಕ್ತಿಯೇ ಮುಖ್ಯ" ಎಂದು ಸಾರಿದ ಇವರು, ಹೆಣ್ಣು-ಗಂಡು ಎಂಬ ವ್ಯತ್ಯಾಸ ಮಾಡದೆ ಎಲ್ಲರಿಗೂ ಸಮಾನ ಗೌರವ ಸಿಗಬೇಕು ಎಂದು ಹಂಬಲಿಸಿದ ಕ್ರಾಂತಿಕಾರಿ ಪುರುಷರಾಗಿದ್ದಾರೆ. ಬಸವಣ್ಣನವರಿಗಿಂತ ಮೊದಲೇ ವಚನ ಕ್ರಾಂತಿಗೆ ನಾಂದಿ ಹಾಡಿದ ದಾಸಿಮಯ್ಯನವರ ಕೊಡುಗೆ ಕನ್ನಡ ಸಾಹಿತ್ಯ ಮತ್ತು ಸಾಂಸ್ಕೃತಿಕ ಲೋಕಕ್ಕೆ ಅಪಾರವಾದುದು. ವೃತ್ತಿಯಿಂದ ನೇಕಾರರಾಗಿದ್ದ ಇವರು, ಶ್ರಮಜೀವನದ ಮಹತ್ವವನ್ನು ಸಾರಿದವರು. ಅಜ್ಞಾನದ ಕತ್ತಲನ್ನು ಕಳೆದು ಜ್ಞಾನದ ಬೆಳಕನ್ನು ನೀಡುವ ಇವರ ಚಿಂತನೆಗಳು ಸಮಾಜದಲ್ಲಿ ಸಮಾನತೆ ಮತ್ತು ಭಕ್ತಿಯ ಮಾರ್ಗವನ್ನು ತೋರಿವೆ ಎಂದರು. ವಿಶೇಷ ಉಪನ್ಯಾಸ ನೀಡಿ ಮಾತನಾಡಿದ ಬಸವ ಸೇವಾ ಪ್ರತಿಷ್ಠಾದ ಅಧ್ಯಕ್ಷ ಡಾ. ಗಂಗಾಂಬಿಕ ಅಕ್ಕಾ, ಕಲಬುರ್ಗಿ ಜಿಲ್ಲೆಯ ಸುರಪುರ ತಾಲೂಕಿನ ಮುದನೂರಿನಲ್ಲಿ ಜನಿಸಿದ ದೇವರ ದಾಸಿಮಯ್ಯನವರು 'ರಾಮನಾಥ' ಅಂಕಿತದೊಂದಿಗೆ ಸರಳ ಮತ್ತು ವೈಚಾರಿಕವಾಗಿ 176ಕ್ಕೂ ಹೆಚ್ಚು ವಚನಗಳನ್ನು ರಚಿಸಿದ್ದಾರೆ. ಸಮಾನತೆಯ ತತ್ವ ಸಾರಿದ ದಾಸಿನಯ್ಯನವರು ಪ್ರೀತಿಯೇ ಸಂಪತ್ತು ಎಂದು ಬದುಕಿದ್ದವರು. ತಮ್ಮ ಬದುಕಿನದುದ್ದಕ್ಕೂ ಬೇಟೆಗಾರರು ಸೇರಿದಂತೆ ಅನೇಕರ ಮನಪರಿವರ್ತನೆ ಮಾಡಿದ್ದಾರೆ. ದೇವರ ದಾಸಿಮಯ್ಯನವರ ಪತ್ನಿ ದುಗ್ಗಳೆ ಕೂಡ ಮಹಾಸಾಧ್ವಿ ಮತ್ತು ಅನ್ಯೋನ್ಯ ದಾಂಪತ್ಯ ಜೀವನ ನಡೆಸುತ್ತಿದ್ದ ಶರಣೆ. ಎಲ್ಲರೂ ದಾಸಿಮಯ್ಯ ಅವರ ವಚನಗಳನ್ನು ಪಠಣ ಮಾಡಬೇಕು ಹಾಗೂ ಅವರು ಹಾಕಿಕೊಟ್ಟ ಮಾರ್ಗದಲ್ಲಿ ಸಾಗಬೇಕೆಂದರು.

ವೇದಿಕೆ ಕಾರ್ಯಕ್ರಮ ಮುಂಚಿತವಾಗಿ ದೇವರ ದಾಸಿಮಯ್ಯ ಭಾವಚಿತ್ರ ಮೆರವಣಿಗೆ ನಗರದ ಗಣೇಶ್ ಮೈದಾನದಿಂದ ಪ್ರಾರಂಭವಾಗಿ ಹರಳಯ್ಯ ವೃತ್ತ, ಶಿವಾಜಿ ವೃತ್ತ, ಭಗತ್ ಸಿಂಗ್ ವೃತ್ತ, ಬಸವವೇಶ್ವರ ವೃತ್ತ, ಅಂಬೇಡ್ಕರ್ ವೃತ್ತ, ರೋಟರಿ ವೃತ್ತ ಮಾರ್ಗದಿಂದ ಸಾಗಿ ಪೂಜ್ಯ ಡಾ. ಚನ್ನಬಸವ ಪಟ್ಟದೇವರ ರಂಗಮಂದಿಕ್ಕೆ ತಲುಪಿತು.

ಕಾರ್ಯಕ್ರಮದಲ್ಲಿ ಎಸ್.ಎಸ್.ಎಲ್.ಸಿ., ಪಿಯುಸಿ ಪರೀಕ್ಷೆಯಲ್ಲಿ ಗರಿಷ್ಠ ಅಂಕ ಪಡೆದು ಪಾಸಾದ ವಿದ್ಯಾರ್ಥಿಗಳಿಗೆ, ನಿವೃತ್ತ ಸರ್ಕಾರಿ ನೌಕರರಿಗೆ ಹಾಗೂ ಸಮಾಜಕ್ಕೆ ಕೊಡುಗೆ ನೀಡಿದವರಿಗೆ ವಿಶೇಷವಾಗಿ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾಡಳಿತ ಕಚೇರಿಯ ಸಹಾಯಕ ನಿರ್ದೇಶಕ ಸೋಮಶೇಖರ್ ಮಡಕಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ರಾಜಶೇಖರ ಒಟಗೆ, ಸಮಾಜದ ಪ್ರಮುಖರಾದ ರಾಮಕೃಷ್ಣ ಸಾಳೆ, ಪ್ರಶಾಂತ್ ಸೇಂದ್ರೆ, ಮಾಧವ ಚೌಡೆಕರ್, ಅಶೋಕ್ ಎಲ್ಲಿ, ನಾಗಪ್ಪ ಜಂಬಗಿ, ಸೋಮಶೇಖರ್ ಅಮಲಾಪುರ, ಕೋಟೆ ವಿಶ್ವನಾಥ್, ಅನುರಾಧ ಚಂದಾ ಸೇರಿದಂತೆ ನೇಕಾರ ಸಮಾಜ ಬಂಧುಗಳು ಉಪಸ್ಥಿತರಿದ್ದರು.

# ಸರ್ಕಾರದ ಮೊಂಡುವಾದ ಜೇಡರ ದಾಸಿಮಯ್ಯಗೆ ದ್ರೋಹ ಮಾಡುವ ದಡ್ಡತನ

ಅಭಿಮತ

■ ಉದಯರಶ್ಮಿ ದಿನಪತ್ರಿಕೆ

ಕರ್ನಾಟಕ ಸರಕಾರ ಎಲ್ಲಾ ಶರಣರ ಜಯಂತಿಗಳನ್ನು ಆಚರಿಸುವ ಒಳ್ಳೆಯ ಯೋಜನೆಯನ್ನು ರೂಪಿಸಿದೆ. ಆದರೆ ಕಳೆದ 13 ವರ್ಷಗಳಿಂದ ನಿರಂತರವಾಗಿ ಅದೆಷ್ಟೋ ಮನವಿಗಳನ್ನು ಲೇಖನಗಳನ್ನು ಬರೆದು ಸರಕಾರಕ್ಕೆ ಜೇಡರ ದಾಸಿಮಯ್ಯ ಮತ್ತು ದೇವರ ದಾಸಿಮಯ್ಯ ಇಬ್ಬರೂ ಬೇರೆ ಬೇರೆ ಎಂಬ ಮನವಿ ಸಲ್ಲಿಸಿದರೂ ಸಹಿತ ಕುರುಡು ಕೆಪ್ಪರ ಸರಕಾರ ಇದಕ್ಕೆ ಸ್ಪಂದಿಸುತ್ತಿಲ್ಲ. ಇದು ಲಿಂಗಾಯತ ನೇಕಾರ ಸಮುದಾಯದವರಿಗೆ ಮಾಡುವ ಬಹು ದೊಡ್ಡ ದ್ರೋಹವಾಗಿದೆ.

ದೇವರ ದಾಸಿಮಯ್ಯ ಮತ್ತು ಜೇಡರ ದಾಸಿಮಯ್ಯ ಬೇರೆ ಬೇರೆ

ದೇವರ ದಾಸಿಮಯ್ಯ ಮತ್ತು ಜೇಡರ ದಾಸಿಮಯ್ಯ ಇಬ್ಬರೂ ಬೇರೆ ಬೇರೆ. ಪ್ರತಿ ವರ್ಷವೂ ಕರ್ನಾಟಕ ಸರಕಾರವು ಆದ್ಯ ವಚನಕಾರ ದೇವರ ದಾಸಿಮಯ್ಯನ ಜಯಂತಿಗೆ ಲಕ್ಷ ಲಕ್ಷ ಹಣ ಕೊಟ್ಟು ರಾಜ್ಯಾದಂತ ದೇವರ ದಾಸಿಮಯ್ಯನವರ ಜಯಂತಿಯನ್ನು ಆಚರಿಸುವ ಕಾರ್ಯಕ್ಕೆ ಇಳಿದಿರುವುದು ಹಾಸ್ಯಾಸ್ಪದವಾಗಿದೆ.

ದೇವರ ದಾಸಿಮಯ್ಯ 11 ನೆಯ ಶತಮಾನದ ಶಿವ ಭಕ್ತ , ಇಮ್ಮಡಿ ಜಯಸಿಂಹನ ಮಡದಿ ಸುಗ್ಗಲೆ ಇವಳಿಗೆ ಶಿವಬೋಧ ದೀಕ್ಷೆ ನೀಡಿ ಅವಳನ್ನು ಶೈವ ಧರ್ಮದ ಅನುಯಾಯಿಯನ್ನಾಗಿ ಮಾಡಿದರು. ದೇವರ ದಾಸಿಮಯ್ಯ ಅಪ್ಪಟ ಸನ್ಯಾಸಿಯಾಗಿದ್ದು ಮತ್ತು ಯಾವುದೇ ವಚನ ರಚನೆ ಮಾಡಿಲ್ಲ. ಆತನು ವೃತ್ತಿಯಿಂದ ಕೃಷಿಕನಾಗಿದ್ದನೆಂದು ತಿಳಿದು ಬರುತ್ತದೆ. ಆತನು ವಚನಕಾರನಲ್ಲ.

ಜೇಡರ ದಾಸಿಮಯ್ಯ ಮತ್ತು ದುಗ್ಗಳೆ 12 ಶತಮಾನದ ಬಸವಾದಿ ಪ್ರಮಥರ ಸಮಕಾಲೀನರು. ಇಬ್ಬರೂ ವಚನಕಾರರು. ಇವರಿಬ್ಬರ ಬಗ್ಗೆ ಬಸವಣ್ಣ ಆದಿಯಾಗಿ ಅನೇಕ ವಚನಕಾರರು ತಮ್ಮ ವಚನಗಳಲ್ಲಿ




ಜೇಡರ ದಾಸಿಮಯ್ಯ ಮತ್ತು ಮಡದಿ ದುಗ್ಗಳೆ ಇವರ ಹೆಸರನ್ನು ಪ್ರಸ್ತಾಪಿಸಿದ್ದಾರೆ. ಅದೇ ರೀತಿ ಜೇಡರ ದಾಸಿಮಯ್ಯ ಮತ್ತು ದುಗ್ಗಳೆ 12 ಶತಮಾನದ ಬಸವಾದಿ ಪ್ರಮಥರ ಬಗ್ಗೆ ತಮ್ಮ ಅನೇಕ ವಚನಗಳಲ್ಲಿ ಉಲ್ಲೇಖ ಮಾಡಿದ್ದಾರೆ. ವೃತ್ತಿಯಲ್ಲಿ ನೇಯ್ಗೆ ಕೆಲಸ ಮಾಡುವ ನೇಕಾರರು.

ಇಂತಹ ಗೊಂದಲಗಳ ಬಗ್ಗೆ ಡಾ ಎಂ ಎಂ ಕಲ್ಬುರ್ಗಿ ಅವರು 40 ವರ್ಷಗಳ ಹಿಂದೆಯೇ ಈ ವಿಷಯವನ್ನು ಸಂಶೋಧನೆಯ ಮೂಲಕ ಬಹಿರಂಗಗೊಳಿಸಿದ್ದಾರೆ. ಡಾ ಎಚ. ದೇವಿರಪ್ಪ, ಡಾ. ಎಚ್ ಚಂದ್ರಶೇಖರ , ಡಾ ಎಂ ಚಿದಾನಂದ ಮೂರ್ತಿ, ಡಾ. ಶಶಿಕಾಂತ ಪಟ್ಟಣ ಮುಂತಾದ ಅನೇಕ ಸಂಶೋದಕರು ಜೇಡರ ದಾಸಿಮಯ್ಯ ಮತ್ತು ದೇವರ ದಾಸಿಮಯ್ಯ ಇಬ್ಬರೂ ಬೇರೆ ಬೇರೆ ಎಂಬ ನಿರ್ಣಯಕ್ಕೆ ಬಂದಿದ್ದಾರೆ.


ಜೇಡರ ದಾಸಿಮಯ್ಯನ ವಚನ ಅಂಕಿತ -ರಾಮನಾಥ ಮತ್ತು ದುಗ್ಗಳೆ ಇವರ ವಚನಾಂಕಿತ ದಾಸಯ್ಯ ಪ್ರಿಯ ರಾಮನಾಥ.

ವಸ್ತು ಸ್ಥಿತಿ ಹೀಗಿದ್ದರೂ ವಚನಕಾರನಲ್ಲದ ದೇವರ ದಾಸಿಮಯ್ಯನವರಿಗೆ ಆದ್ಯ ವಚನಕಾರ ಪಟ್ಟ ಕಟ್ಟಿ ಅವರು ರಚಿಸದ ವಚನಗಳಿಗೆ ಮಾಲಕರನ್ನಾಗಿ ಮಾಡಿ

ಕರ್ನಾಟಕ ಸರಕಾರ ಘೋರ ಅಪರಾಧ ಮಾಡುತ್ತಿದೆ. ಅಷ್ಟೆ ಅಲ್ಲ ಜೇಡರ ದಾಸಿಮಯ್ಯನವರ ಮಡದಿ ದುಗ್ಗಳೆಯನ್ನು ದೇವರ ದಾಸಿಮಯ್ಯನವರ ಮಡದಿ ಅಂತಾ ಹೇಳಿ ಜೇಡರ ದಾಸಿಮಯ್ಯನವರ ಮತ್ತು ಮಡದಿ ದುಗ್ಗಳೆಯ ಚರಿತ್ರೆಗೆ ಮಸಿ ಬಳೆಯುವ ಕೆಲಸ ಮಾಡಿದ್ದಾರೆ.

ಡಾ ಎಂ ಚಿದಾನಂದ ಮೂರ್ತಿ ಡಾ ವಿದ್ಯಾಶಂಕರ ಮತ್ತು ನಾನು -ಈ ದಿಶೆಯಲ್ಲಿ ಪ್ರತಿಭಟಿಸಿದ್ದು ಸೂಕ್ತ ಮತ್ತು ಸ್ತುತ್ಯಾರ್ಹ ಆದರೆ ಇದು ಪ್ರಚಾರ ಗಿಟ್ಟಿಸುವ ತಂತ್ರವಾಗಬಾರದು. ಮತ್ತು ವಿರೋಧಕ್ಕಾಗಿ ವಿರೋಧಿಸುವ ಹುಚ್ಚುತನವಿರಬಾರದು.

ಇಂದು ಬಹುತೇಕ ಸಂಶೋಧಕರು ಜೇಡರ ದಾಸಿಮಯ್ಯ ಮತ್ತು ದೇವರ ದಾಸಿಮಯ್ಯ ಇಬ್ಬರೂ ಬೇರೆ ಬೇರೆ ಎಂಬ ನಿರ್ಣಯಕ್ಕೆ ಬಂದಿದ್ದಾರೆ. ಆದರೆ 2015 ರ ಗೌರಿ ಲಂಕೇಶ ಪತ್ರಿಕೆಯಲ್ಲಿ ಪ್ರತಿಷ್ಠಿತ ಬಸವ ಪುರಸ್ಕಾರ ಪುರಸ್ಕೃತ ರಂಜಾನ ದರ್ಗಾ ಇವರು ಜೇಡರ ದಾಸಿಮಯ್ಯ ಮತ್ತು ದೇವರ ದಾಸಿಮಯ್ಯ ಇಬ್ಬರೂ ಒಂದೆ, ಡಾ.ಎಂ ಚಿದಾನಂದ ಮೂರ್ತಿಯವರ ತರ್ಕದಲ್ಲಿ ಹುರುಳಿಲ್ಲ, ಜೇಡರ ದಾಸಿಮಯ್ಯನವರಿಗೆ ಜನರು ಗೌರವದಿಂದ ದೇವರ ದಾಸಿಮಯ್ಯವೆಂದು




ಕರೆದರು ಅಂತಾ ಬರೆದಿರುವುದು ಮತ್ತೆ ಗೊಂದಲ ವಿವಾದಕ್ಕೆ ಈಡುಮಾಡಿದೆ.

ಜೇಡರ ದಾಸಿಮಯ್ಯನವರ ಮತ್ತು ಮಡದಿ ದುಗ್ಗಳೆಯವರ ದಾರ್ಶನಿಕ ಮತ್ತು ಪವಿತ್ರ ಜೀವನದ ಜೊತೆ ಚೆಲ್ಲಾಟವಾಡುವ ಕೆಲಸ ಮೊದಲು ನಿಲ್ಲಲಿ. ಸರಕಾರವೂ ಕೂಡಾ ಇಂತಹ ಸಮಯದಲ್ಲಿ ಸಮಾಜವನ್ನು ಒಡೆಯುವ ಕೆಲ ಶಕ್ತಿಗಳಿಗೆ ಕಡಿವಾಣ ಹಾಕಿ , ತಜ್ಞ ಸಮಿತಿ ರಚಿಸಿ ದೇವರ ದಾಸಿಮಯ್ಯ ಮತ್ತು ಜೇಡರ ದಾಸಿಮಯ್ಯ ಇವರ ಜೀವನ ಚರಿತ್ರೆಯ ಕಾಲ ನಿರ್ಣಯ ನಿರ್ಧರಿಸಬೇಕು. ಇಂತಹ ವಿವಾದಗಳು ಕೊನೆಗೊಳ್ಳಲಿ. ನಮ್ಮ ವ್ಯಕ್ತಿ ಪ್ರತಿಷ್ಠೆಗೆ ಶರಣರ ಜೀವನವನ್ನು ಬೀದಿಗೆ ತರುವದು ತರವಲ್ಲ. ಕರ್ನಾಟಕ ಘನ ಸರಕಾರವು ಈ ಕೂಡಲೇ ಎಚ್ಚತ್ತು ಮುಂದಿನ ಸಲ ಬರುವ ಸರಕಾರೀ ಘೋಷಿತ ಆದ್ಯ ವಚನಕಾರರ ದೇವರ ದಾಸಿಮಯ್ಯನವರ ಬದಲಾಗಿ ಆದ್ಯ ವಚನಕಾರ ಜೇಡರ ದಾಸಿಮಯ್ಯನಾಗಬೇಕು.

ಶರಣರ ಜಯಂತಿ ಆಚರಿಸುವುದು ಸೂಕ್ತ ಆದರೆ ಇಂತಹ ವಿವಾದ ಹುಟ್ಟಿಸಿ ಮತ್ತೆ ಜಾತಿಯ ಸಂಘಟನೆಯನ್ನು ಬಲ ಪಡಿಸಿ ಮತಗಳಿಗಾಗಿ ಒಂದು ವರ್ಗವನ್ನು ಓಲೈಸುವ

ಕೆಲಸಕ್ಕೆ ಕರ್ನಾಟಕ ಸರಕಾರ ಮುಂದಾಗಿರುವುದು ದುರಂತದ ಸಂಗತಿ. ಈ ಕೂಡಲೇ ಇಂತಹ ವಿವಾದವು ಇತ್ಯರ್ಥಗೊಳ್ಳಲಿ. ಗೊಂದಲದಲ್ಲಿ ಒಬ್ಬ ಶರಣರ ಕೃತಿಯನ್ನು ಇನ್ನೊಬ್ಬ ಸಾಧಕನಿಗೆ ಹೋಲಿಸಿ ಅರ್ಥವಿಲ್ಲದ ಆಚರಣೆ ಮಾಡುವದು ಆತಂಕದ ವಿಷಯ.

ನನಗೆ ದೇವರ ದಾಸಿಮಯ್ಯ ಮತ್ತು ಜೇಡರ ದಾಸಿಮಯ್ಯ ಇಬ್ಬರ ಬಗ್ಗೆಯೂ ಗೌರವ ಆದರವಿದೆ. ಆದರೆ ಅವರು ಬೇರೆ ಬೇರೆ.



ಲೇಖಕ
■ ಡಾ ಶಶಿಕಾಂತ ಪಟ್ಟಣ
ಪೂನಾ - ರಾಮದುರ್ಗ
ಮೊ: 9552002338

## ದೇಶದ ಸ್ವಾತಂತ್ರಕ್ಕಾಗಿ ನಗುತಲೆ ಗಲ್ಲಿಗೇರಿದ ಕ್ರಾಂತಿಕಾರಿಗಳು: ಡಾ.ಗಾಂಧೀಜಿ ಮೋಳಕೆರೆ



ಕಲಬುರಗಿ:ಭಾರತ ಮಾತೆಯನ್ನು ದಾಸ್ಯದ ಸಂಕೋಲೆಯಿಂದ ಬಿಡಿಸಲು ಹೋರಾಡಿದ ವೀರ ಕ್ರಾಂತಿಕಾರಿಗಳಾದ ಭಗತ್ ಸಿಂಗ್, ಸುಖದೇವ್ ಮತ್ತು ರಾಜಗುರು ಅವರು ಹುತಾತ್ಮರಾದ ದಿನ. 23 ಮಾರ್ಚ್, 1931ರಂದು ಬ್ರಿಟಿಷ್ ಆಡಳಿತ ಭಾರತಾಂಬೆಯ ಈ ಮೂವರು ಸುಪುತ್ರರನ್ನು ನೇಣಿಗೇರಿಸಿತ್ತು. ಶಹೀದ್ ದಿವಸ್ ಎಂದು ಆಚರಿಸಲಾಗುವ ಇಂದಿನ ದಿನ "ಇಂಕ್ವಿಲಾಬ್ ಜಿಂದಾಬಾದ್" ಘೋಷಣೆ, ಭಾರತದ ಮೂಲೆ ಮೂಲೆಯನ್ನು ತಲುಪಿತ್ತು. ಕೇವಲ 23 ವರ್ಷದ ಮೂವರು ತರುಣರು "ಮೇರಾ ರಂಗ್ ದೇ ಬಸಂತಿ ಚೋಲಾ" ಎಂಬ ದೇಶಭಕ್ತಿ ಹಾಡನ್ನು ಹಾಡುತ್ತಾ ನೇಣುಗಂಬದತ್ತ ಹೊರಟಿದ್ದರೆ, ಸ್ವಾತಂತ್ರ್ಯ ಹೋರಾಟದ ಕಿಡಿ ಜ್ವಾಲೆಯಾಗಿ ದೇಶದ ಉದ್ದಗಲಕ್ಕೂ ಹರಡಿತ್ತು ಎಂದು ಡಾ.ಅಂಬೇಡ್ಕರ್ ಪದವಿ ಮಹಾವಿದ್ಯಾಲಯದ ಇತಿಹಾಸ ಪ್ರಾಧ್ಯಾಪಕ ಡಾ.ಗಾಂಧೀಜಿ ಮೋಳಕೆರೆ ಹೇಳಿದರು.

ನಗರದ ಕೆಪಿಇ ಸಂಸ್ಥೆಯ ಡಾ. ಅಂಬೇಡ್ಕರ್ ಪದವಿ ಮಹಾವಿದ್ಯಾಲಯದಲ್ಲಿ ಸೋಮವಾರ ಆಯೋಜಿಸಿದ್ದ ಹುತಾತ್ಮರ ದಿನಾಚರಣೆಯ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಅವರು ಮಾತನಾಡಿದರು.

ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿದ ಕಾಲೇಜಿನ ಪ್ರಾಚಾರ್ಯರಾದ ಸಿದ್ದಪ್ಪ ಎಂ. ಕಾಂತಾ ಅವರು ವಿದ್ಯಾರ್ಥಿಗಳು ದೇಶಕ್ಕಾಗಿ ಪ್ರಾಣವನ್ನು ಅರ್ಪಿಸಿದ ವೀರ ಯುವಕರನ್ನು ಸ್ಮರಿಸಿ ಅಮ್ಮ ವ್ಯಕ್ತಿತ್ವವನ್ನು ತಾವು ರೂಪಿಸಿಕೊಳ್ಳಬೇಕು ಎಂದರು.

ವೇದಿಕೆ ಮೇಲೆ ಕಾಲೇಜಿನ ಅರ್ಥಶಾಸ್ತ್ರ ವಿಭಾಗದ ಪ್ರಾಧ್ಯಾಪಕರಾದ ಡಾ.ನಿರ್ಮಲಾ ಸಿರಗಾಪೂರ,ಡಾ.ಶಿವಕುಮಾರ ,ಡಾ.ಅರುಣ ಜೋಳದಕೂಡ್ಲಿಗಿ, ಶೃತಿ ಇತರರು ಇದ್ದರು.

ಡಾ.ವಸಂತ ನಾಶಿ ನಿರೂಪಿಸಿದರು ಡಾ.ಹರ್ಷವರ್ಧನ ಬಿ ಸ್ವಾಗತಿಸಿದರು ಡಾ.ಸುದರ್ಶನ ಮದನ್ಕರ್ ವಂದಿಸಿದರು.

## ಕೆಜಿಐಎಸ್ 2.0 ಅನುಷ್ಠಾನಕ್ಕೆ ಅಧಿಕಾರಿಗಳ ಸಮನ್ವಯತೆ ಅವಶ್ಯ

### ಕೆಎಸ್ ಆರ್ ಎಸ್ ಎಸಿ, ಡಿಪಿಎಆರ್ ನಿರ್ದೇಶಕ ರಾಜೇಶ ಎನ್. ಎಲ್. ಹೇಳಿಕೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕೆಜಿಐಎಸ್ 2.0 ವ್ಯವಸ್ಥೆಯ ಬಳಕೆ, ಅನುಷ್ಠಾನ ಕುರಿತು ಕಾರ್ಯಾಗಾರದ ಮೂಲಕ ವಿವಿಧ ಮಟ್ಟಗಳಲ್ಲಿ ಸಮನ್ವಯವನ್ನು ಬಲಪಡಿಸಿ, ಯೋಜನೆಯ ಯಶಸ್ವಿ ಅನುಷ್ಠಾನಕ್ಕೆ ಮಾರ್ಗದರ್ಶನ ನೀಡುವುದು ಮುಖ್ಯ ಉದ್ದೇಶವಾಗಿದೆ ಎಂದು ಕೆಎಸ್ ಆರ್ ಎಸ್ ಎಸಿ, ಡಿಪಿಎಆರ್ ನಿರ್ದೇಶಕ ರಾಜೇಶ ಎನ್. ಎಲ್. ಹೇಳಿದರು.

ನಗರದ ಜಿಲ್ಲಾ ಪಂಚಾಯತಿಯ ಸಭಾಂಗಣದಲ್ಲಿ ಮಂಗಳವಾರ ನಡೆದ ಜಿಲ್ಲೆ, ತಾಲೂಕು ಹಾಗೂ ಗ್ರಾಮ ಮಟ್ಟದಲ್ಲಿ ಕೆಜಿಐಎಸ್ 2.0 ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಹಮ್ಮಿಕೊಂಡಿದ್ದ ಕಾರ್ಯಾಗಾರವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಈ ಯೋಜನೆ ಯಶಸ್ವಿ ಅನುಷ್ಠಾನಕ್ಕೆ ಜಿಲ್ಲಾ ಮಟ್ಟದ ಅಧಿಕಾರಿಗಳ ಸಮನ್ವಯತೆ ಮುಖ್ಯವಾಗಿದ್ದು, ಎಲ್ಲರೂ ಪರಸ್ಪರ ಸಹಕಾರ ನೀಡಬೇಕು ಎಂದರು.

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ (ಇ-ಆಡಳಿತ) ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರವು, ಕರ್ನಾಟಕ ಭೌಗೋಳಿಕ ಮಾಹಿತಿ ವ್ಯವಸ್ಥೆ ಆವೃತ್ತಿ ಯೋಜನೆಯನ್ನು ರಾಜ್ಯದಲ್ಲಿ ಯಶಸ್ವಿಯಾಗಿ ಅನುಷ್ಠಾನಗೊಳಿಸಿದೆ. ಈ ಯೋಜನೆಯ ಆವೃತ್ತಿ 2.0 ಅನ್ನು ಅನುಷ್ಠಾನ ಹಾಗೂ ಯಶಸ್ವಿಗೆ ಎಲ್ಲ ಇಲಾಖೆಗಳ ಭಾಗವಹಿಸುವಿಕೆ ಅಗತ್ಯವಾಗಿದೆ ಎಂದವರು ಹೇಳಿದರು.



ಇದು ಜಿಐಎಸ್ ಆಧಾರಿತ ನೈಜ-ಸಮಯದ ದತ್ತಾಂಶ, ಆಧುನಿಕ ವಿಶ್ಲೇಷಣೆ ಮತ್ತು ತಾಂತ್ರಿಕ ಸಾಮರ್ಥ್ಯಗಳನ್ನು ಸಂಯೋಜಿಸುವ ಗುರಿಯೊಂದಿಗೆ ತ್ವರಿತವಾಗಿ ನಾಗರಿಕರು ಮತ್ತು ಇಲಾಖಾ -ಅಧಿಕಾರಿಗಳು, ಭೂಶಿಕ ಮಾಹಿತಿಯೊಂದಿಗೆ ವ್ಯವಹಾರ ನಡೆಸಲು ಹಾಗೂ ಓಞಅ ಗಳನ್ನು ನೀಡಲು, ಸುಧಾರಿತ ಆಖಖ ಅನ್ವಯಿಕೆಗಳನ್ನು ಅಭಿವೃದ್ಧಿಪಡಿಸುವ ಉದ್ದೇಶ ಹೊಂದಿದೆ ಎಂದರು.

ಜಿಲ್ಲಾ, ತಾಲೂಕು, ಗ್ರಾಮ ಪಂಚಾಯಿತಿಗಳ ಸ್ಥಳೀಯ ಸಮಸ್ಯೆಗಳಿಗೆ ಜಿಐಎಸ್ ಮೂಲಕ ಒದಗಿಸಬಹುದಾದ ತಾಂತ್ರಿಕ ಪರಿಹಾರಗಳನ್ನು ಅಳವಡಿಸಲು, ಜಿಲ್ಲಾ ಮಟ್ಟದ ಇಲಾಖೆಗಳಿಗೆ ಅವಶ್ಯವಿರುವ ಜಿಐಎಸ್ ತಂತ್ರಾಂಶ ಮತ್ತು ದತ್ತಾಂಶಗಳನ್ನು ಅಭಿವೃದ್ಧಿಪಡಿಸುವ ಅಗತ್ಯವಿದೆ ಎಂದರು.

ಏಪ್ರಿಲ್ 02 ರಂದು ಚಾಮರಾಜನಗರದಲ್ಲಿ ಅದರಂತೆ ಮುಂಬರುವ ದಿನಗಳಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಕೆಜಿಐಎಸ್ ಕುರಿತು ಕಾರ್ಯಗಾರ ಮಾಡುತ್ತೇವೆ, ಇದರಿಂದ ಆ ಜಿಲ್ಲೆಯ ಸಮಸ್ಯೆಗಳನ್ನು ಕಡಿಮೆಗೊಳಿಸಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಸದ್ಯದಲ್ಲಿ ಒಟ್ಟು 251 ಆಪ್ಲಿಕೇಶನ್ ಇದ್ದು ಅದರಲ್ಲಿ 101 ಆಪ್ಲಿಕೇಶನ್ ಗಳು ಚಾಲತಿಯಲ್ಲಿವೆ ಅದರಲ್ಲಿ 41 ಆಪ್ಲಿಕೇಶನ್ ಗಳು ಮೊಬೈಲ್ ಬಳಕೆಗೆ ಮತ್ತು 61 ಆಪ್ಲಿಕೇಶನ್ ವೆಬ್ ಸೈಟ್ ಗಳು ಉಪಯೋಗ ಮಾಡಬಹುದು.

ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು ಮಾತನಾಡಿ, ಕೆಜಿಐಎಸ್ 2.0 ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಮಾಹಿತಿ ಅರಿತುಕೊಳ್ಳಬೇಕು. ಈ ಯೋಜನೆಯಿಂದ ಸುಗಮ ಕಾರ್ಯನಿರ್ವಹಣೆಗೆ ಸಹಕಾರಿಯಾಗಿದೆ. ಅನುಷ್ಠಾನಕ್ಕೆ ಎಲ್ಲರೂ ಕೈ ಜೋಡಿಸಬೇಕು ಎಂದರು.

ನಿವೃತ್ತ ಐಎಎಸ್ ಅಧಿಕಾರಿ ಡಾ.ರಾಜಕುಮಾರ ಕತ್ರಿ ಅವರು ವಿಡಿಯೋ ಸಂವಾದದ ಮೂಲಕ ಮಾತನಾಡಿ, ಈ ತಂತ್ರಾಶ ಬಳಕೆಯಿಂದ ಶೀಘ್ರ, ಸುಲಲಿತ ಹಾಗೂ ತುರ್ತು ನಿರ್ಣಯ ಕೈಗೊಳ್ಳಲು ಅತ್ಯಂತ ಸಹಕಾರಿಯಾಗಿದೆ. ಇಂತಹ ಮಹತ್ವದ ಯೋಜನೆಗೆ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಅತ್ಯಂತ ಆಸ್ಥೆ ವಹಿಸಿ ಇಂತಹ ಮಹತ್ವಪೂರ್ಣ ಕಾರ್ಯ ಅನುಷ್ಠಾನಗೊಳ್ಳಲು ಮುತುವರ್ಜಿ ವಹಿಸಿದ್ದಾರೆ ಎಂದರು.

ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಈ ತಂತ್ರಾಂಶದ ಬಳಕೆ ಮಾಡಿ, ಸಮಸ್ಯೆ ಸರಳವಾಗಿ ಪರಿಹರಿಸಿಕೊಳ್ಳಬಹುದಾಗಿದೆ. ಜಿಲ್ಲೆಯಲ್ಲಿ ನಡೆಯುವ ಈ ಶಿಬಿರದ ಸದುಪಯೋಗಪಡಿಸಿಕೊಳ್ಳುವಂತೆ ಅವರು ಹೇಳಿದರು.

ಜಿಲ್ಲಾ ಪಂಚಾಯತಿಯ ಕಾರ್ಯನಿರ್ಹಣಾಧಿಕಾರಿ ರಿಷಿ ಆನಂದ ಅವರು ಮಾತನಾಡಿ, ಕೆಜಿಐಎಸ್-2 ಸದ್ಬಳಕೆ ಮಾಡಿಕೊಳ್ಳಲು ಈ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ. ಇದು ತಂತ್ರಜ್ಞಾನ ಯುಗವಾಗಿದೆ. ನಮ್ಮ ರಾಜ್ಯ ಮಾಹಿತಿ ತಂತ್ರಜ್ಞಾನಕ್ಕೆ ಹೆಸರುವಾಸಿ. ಕಾಲಕಾಲಕ್ಕೆ ಅಭಿವೃದ್ಧಿ ಪಡಿಸುವ ತಂತ್ರಜ್ಞಾನ ಮೈಗೂಡಿಸಿಕೊಳ್ಳುವ ಮೂಲಕ ಸಾರ್ವಜನಿಕರಿಗೆ ಅಗತ್ಯ ಸೇವೆಗಳನ್ನು ತ್ವರಿತಗತಿಯಲ್ಲಿ ತಲುಪಿಸಲು ಕಾರ್ಯನಿರ್ವಹಿಸಬೇಕು ಎಂದರು.

ಪ್ರಾಥಮಿಕ ಆರೋಗ್ಯ ಕೇಂದ್ರ, ಚೆಕ್ ಡ್ಯಾಂ, ಗ್ರಾಪಂ ಮಟ್ಟದ ಆಸ್ತಿ ಮಾಹಿತಿ, ಅಂಗನವಾಡಿ ಕೇಂದ್ರ ನಾನಾ ಮಾಹಿತಿಯನ್ನು ಸುಲಭವಾಗಿ ಪಡೆಯಬಹುದಾಗಿದೆ. ಈ ಕಾರ್ಯಾಗಾರ ನಮ್ಮ ಜಿಲ್ಲೆಯಿಂದ ಆರಂಭವಾಗಿದ್ದು, ಸಾರ್ವಜನಿಕರ ಹಿತದೃಷ್ಟಿಯಿಂದ ಈ ತಂತ್ರಾಂಶ ಬಳಸಿಕೊಳ್ಳುವಂತೆ ಅವರು ಹೇಳಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ಔದ್ರಾಮ ಅವರು ಸ್ವಾಗತಿಸಿ ವಂದಿಸಿದರು. ಕ್ರೀಡಾಧಿಕಾರಿ ರಾಜಶೇಖರ ದೈವಾಡಿ ನಿರೂಪಿಸಿದರು. ಕಾರ್ಯಾಗಾರದಲ್ಲಿ ಸಂಬಂಧಿತ ಇಲಾಖೆಗಳ ಅಧಿಕಾರಿಗಳು, ತಾಂತ್ರಿಕ ಸಿಬ್ಬಂದಿ ಹಾಗೂ ಸ್ಥಳೀಯ ಸಂಸ್ಥೆಗಳ ಪ್ರತಿನಿಧಿಗಳು ಭಾಗವಹಿಸಿದ್ದರು.

## ಕವಿಗಳು ಕಾಲದ ಧ್ವನಿಯಾಗಬೇಕು

ಕಲಬುರಗಿ: ಕವಿಗಳು, ಸಾಹಿತಿಗಳು ಸುಮ್ಮನೆ ಕಾವ್ಯ ರಚಿಸದೆ ಸಾಮಾಜಿಕ ಜವಾಬ್ದಾರಿಯೊಂದಿಗೆ ಕಾಲದ ಧ್ವನಿಯಾಗಬೇಕು ಎಂದು ನಾಡಿನ ಪ್ರಮುಖ ಕವಿ-ಕಥೆಗಾರ ಪ್ರೊ. ಸಿ.ಎಸ್.ಆನಂದ ಹೇಳಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಆಯೋಜಿಸಿದ್ದ "ಕವಿ ಕಂಡ ಯುಗಾದಿ" ವಿಶೇಷ ಕವಿಗೋಷ್ಠಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು , ಕವಿತೆ ರಚಿಸುವುದು ಕೇವಲ ಕವಿಯ ಭಾವನೆಗಳ ಅಭಿವ್ಯಕ್ತಿಯಲ್ಲ ಅದೊಂದು ಕ್ಲಿಷ್ಟಕರವಾದ ಸೃಜನಾತ್ಮಕ ಪ್ರಕ್ರಿಯೆ. ಕವಿ ಸಮಾಜದ ಒಂದು ಭಾಗವಾಗಿರುವುದರಿಂದ ಪ್ರಜಾಪ್ರಭುತ್ವ ಮತ್ತು ಭಾರತೀಯ ಸಂವಿಧಾನದ ಆಶಯಗಳನ್ನು ಸಂರಕ್ಷಿಸುವ ಹೊಣೆಗಾರಿಕೆಯನ್ನು ತಮ್ಮ ಹೆಗಲ ಮೇಲೆ ಹೊತ್ತುಕೊಳ್ಳಬೇಕು ಎಂದು ಸಲಹೆ ನೀಡಿದರು.

ಕವಿಗಳಾದ ಪ್ರಭು ನಿಷ್ಠಿ, ಶಕುಂತಲಾ ಪಾಟೀಲ ಜಾವಳಿ, ಜಯಶ್ರೀ ಜಮಾದಾರ, ಅಶ್ವಿನಿ ಪಾಟೀಲ, ವಿದ್ಯಾಧರ ಕಾಂಬಳೆ, ಶರಣು ಅತನೂರ, ಭೀಮರಾಯ ಹೇಮನೂರ, ಜ್ಯೋತಿ ಪಾಟೀಲ, ಶ್ರೀದೇವಿ ಪೊಪಾಟೀಲ, ಕವಿತಾ .ಪಿ.ಮೋರಾ ಅವರು ವರ್ತಮಾನಕ್ಕೆ ಸ್ಪಂದಿಸುವ ಕವಿತೆ ವಾಚಿಸಿ ಪ್ರೇಕ್ಷಕರ ಗಮನ ಸೆಳೆದರು. ವೇದಿಕೆಯಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷರಾದ ವಿಜಯಕುಮಾರ ಪಾಟೀಲ ತೇಗಲತಿಪ್ಪಿ, ದಕ್ಷಿಣ ವಲಯ ಕ.ಸಾ.ಪ. ಅಧ್ಯಕ್ಷರಾದ ರವಿಕುಮಾರ ಶಹಾಪುರಕರ, ಧರ್ಮರಾಜ ಜವಳಿ ಗೌರವ ಉಪಸ್ಥಿತರಿದ್ದರು.

## ಎಸ್‌ಎಸ್‌ಎಲ್‌ಸಿ ಪರೀಕ್ಷಾ ಉತ್ತಮ ಫಲಿತಾಂಶ ನಿರೀಕ್ಷೆ: ಡಿಡಿಪಿಐ ಡವಳಗಿ

ಆಳಂದ: ಕಲಬುರಗಿ ಜಿಲ್ಲಾ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕಿ (ಡಿಡಿಪಿಐ) ಶಂಕರಮ್ಮ ಡವಳಗಿ ಅವರು ಸೋಮವಾರ ಆಳಂದ ಪಟ್ಟಣಕ್ಕೆ ಭೇಟಿ ನೀಡಿ ಎಸ್‌ಎಸ್‌ಎಲ್‌ಸಿ ವಿಜ್ಞಾನ ಪರೀಕ್ಷೆಗಳ ಸುವ್ಯವಸ್ಥೆಯನ್ನು ಪರಿಶೀಲಿಸಿದರು.

ಪಟ್ಟಣ ಸೇರಿದಂತೆ ಗ್ರಾಮೀಣ ಭಾಗದಲ್ಲಿ ಸ್ಥಾಪಿಸಲಾದ ಪರೀಕ್ಷಾ ಕೇಂದ್ರಗಳ ಮೇಲೆ ಅಧಿಕಾರಿಗಳು ಹದ್ದಿನ ನಿಗಾವಹಿಸಿರುವುದು ಗಮನಾರ್ಹವಾಗಿದೆ.

ಕಲಬುರಗಿ ಜಿಲೆಯಲ್ಲಿ ಆರಂಭಗೊಂಡ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ 141 ಕೇಂದ್ರಗಳಲ್ಲಿ 51744 ವಿದ್ಯಾರ್ಥಿಗಳು ಪರೀಕ್ಷೆ ಬರೆಯುತ್ತಿದ್ದಾರೆ. ಕೇಂದ್ರಗಳಲ್ಲಿ ಕುಡಿಯುವ ನೀರು, ವೆಬ್‌ಕಾಸ್ಟಿಂಗ್ ಮೂಲಸೌಲಭ್ಯಗಳನ್ನುಕಲ್ಪಿಸಲಾಗಿದೆ. ಇದುವರೆಗೂ ಯಾವುದೇ ಅಹಿತಕರ ಘಟನೆ ಸಂಭವಿಸಿಲ್ಲ. ಕೇಂದ್ರಗಳಿಗೆ ಬಂದೋಬಸ್ತ್ ಕಲ್ಪಿಸಲಾಗಿದೆ.

## ಯುಪಿಎಸ್‌ಸಿ ಪರೀಕ್ಷೆಯಲ್ಲಿ 880ನೇ ರ್‍ಯಾಂಕ್ ಪಡೆದ ಚಂದ್ರಶೇಖರಗೆ ಸನ್ಮಾನ

ಕಲಬುರಗಿ:ನಗರದ ಸರ್ವಜ್ಞ ಮತ್ತು ಜಸ್ಟಿಸ್ ಶಿವರಾಜ ಪಾಟೀಲ ಪದವಿ ಪೂರ್ವ ವಿಜ್ಞಾನ ಮಹಾವಿದ್ಯಾಲಯದಲ್ಲಿ ಸರ್ವಜ್ಞ ಕಾಲೇಜಿನ ಹಳೆ ವಿದ್ಯಾರ್ಥಿಯಾದ ಚಂದ್ರಶೇಖರ್ ಮಾನಸೆಪ್ಪ ಇವರು ಕೇಂದ್ರ ಲೋಕಸೇವಾ ಆಯೋಗದ ಪರೀಕ್ಷೆಯಲ್ಲಿ 880ನೇ ಯಾರ್ಂಕ್ ಪಡೆದಿದ್ದಕ್ಕಾಗಿ ಇವರಿಗೆ ಡೊಳ್ಳಿನ ಮೆರವಣಿಗೆ ಮತ್ತು ಎನ್.ಸಿ.ಸಿ. ವಿದ್ಯಾರ್ಥಿಗಳ ಪರೇಡ್ ಮುಖಾಂತರ ಬರಮಾಡಿಕೊಂಡು ಅಭಿನಂದನಾ ಸಮಾರಂಭ ಹಮ್ಮಿಕೊಳ್ಳಲಾಗಿತ್ತು.

ಸನ್ಮಾನ ಸ್ವೀಕರಿಸಿದ ಚಂದ್ರಶೇಖರ್ ಮಾನಸೆಪ್ಪ ಮಾತನಾಡುತ್ತಾ, ಎಸ್.ಎಸ್.ಎಲ್.ಸಿ. ಶಹಾಪೂರ ತಾಲೂಕಿನ ವನದುರ್ಗ ಸರ್ಕಾರಿ ಪ್ರೌಢಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ಪಾಸಾದಾಗ ಮುಂದೆ ಏನು ಮಾಡಬೇಕು ಎಂಬುದು ತಿಳಿಯಲಿಲ್ಲ. ನಂತರ ಕಲಬುರಗಿಯ ಸರ್ವಜ್ಞ ಕಾಲೇಜಿನಲ್ಲಿ ಪ್ರಥಮ ಪಿಯುಸಿ ವಿಜ್ಞಾನ ಸೇರಿಕೊಂಡಾಗ ನನ್ನ ಜೀವನದ ತಿರುವಿಗೆ ಮತ್ತು ಸಾಧನೆಗೆ ಕಾರಣವಾಯಿತು.

ಪಿಯುಸಿಯ ವಾರ್ಷಿಕೋತ್ಸವದಲ್ಲಿ ನ್ಯಾಯಮೂರ್ತಿ ಶಿವರಾಜ ಪಾಟೀಲ ಅವರು ಗ್ರಾಮೀಣ ಭಾಗದ ಕನ್ನಡ ಮಾಧ್ಯಮದ ವಿದ್ಯಾರ್ಥಿಗಳು ಕೂಡ ಐ.ಎ.ಎಸ್., ಐ.ಪಿ.ಎಸ್. ಆಗಿ ಸಾಧನೆ ಮಾಡಬಹುದೆಂದು ಹುರಿದುಂಬಿಸಿ ಮಾತನಾಡಿದರು. ಆಗ ನ್ಯಾಯಮೂರ್ತಿ ಡಾ.ಶಿವರಾಜ ವಿ.ಪಾಟೀಲ ಅವರ ನುಡಿಮುತ್ತುಗಳು ನನ್ನ ಮೇಲೆ ಬಹಳ ಪರಿಣಾಮ ಬೀರಿದವು ಹಾಗೂ ಅಂದಿನ ಅತಿಥಿಗಳಾದ ಶಾಲಿನಿ ರಜನೀಶ್ ಐ.ಎ.ಎಸ್. ಅಧಿಕಾರಿ ಅವರು ಕೂಡ ಮಾತನಾಡಿದ್ದು ನನಗೆ ಪ್ರೇರಣೆಯಾಯಿತು. ಆಗ ಅವರ ಭಾಷಣ ಕೇಳಿ ಅವರಂತೆ ಐ.ಎ.ಎಸ್. ಪಾಸಾಗಿ ಸಾಧನೆ ಮಾಡಬೇಕೆಂಬ ಛಲ ಮನಸ್ಸಿನಲ್ಲಿ ಮೂಡಿತು. ಅದಕ್ಕಾಗಿ ಛಲದಿಂದ, ಕಠಿಣ

ಪರಿಶ್ರಮದಿಂದ ಓದಿದೆ ಎಂದು ಹೇಳಿದರು.

ನನ್ನ ಈ ಸಾಧನೆಗೆ ಸರ್ವಜ್ಞ ಕಾಲೇಜಿನಲ್ಲಿ ಪ್ರೊ. ಚನ್ನಾರಡ್ಡಿ ಪಾಟೀಲ ಅವರ ಸತತ ಪ್ರೇರಣೆ, ಉತ್ತಮ ಮಾರ್ಗದರ್ಶನ ಮತ್ತು ಮುಂಜಾನೆಯಿಂದ ಸಂಜೆವರೆಗಿನ ಶಿಸ್ತುಬದ್ಧ ನಿರಂತರ ಅಧ್ಯಯನ ಐ.ಎ.ಎಸ್. ಓದುವುದರಲ್ಲಿ ಬಹಳಷ್ಟು ಉಪಯೋಗವಾಯಿತು ಎಂದು ಸರ್ವಜ್ಞ ಕಾಲೇಜಿನ ವಿದ್ಯಾರ್ಥಿಯಾಗಿದ್ದಾಗಿನ ನೆನಪುಗಳನ್ನು ಸ್ಮರಿಸಿಕೊಂಡರು. ಅಂದು ಇದೇ ವೇದಿಕೆಯ ಮೇಲೆ ನೆನಪಿನ ಕಾಣಿಕೆ ಪಡೆದಿದ್ದೇನೆ. ಇಂದು ಇಲ್ಲಿ

ಸನ್ಮಾನಗೊಳ್ಳುತ್ತಿರುವುದು ಸಂತಸವಾಗಿದೆ ಎಂದು ಹರ್ಷ ವ್ಯಕ್ತಪಡಿಸಿದರು.




ಇಲ್ಲಿನ ಶಿಸ್ತು, ಉತ್ತಮ ವಾತಾವರಣ ಹಾಗೂ ಅನೇಕ ಕಾರ್ಯಕ್ರಮಗಳ ಮುಖಾಂತರ ವಿವಿಧ ಸಾಧಕರನ್ನು ಕರೆಸಿ ಪ್ರೇರೇಪಿಸುವುದು ವ್ಯಕ್ತಿಯನ್ನು ಎತ್ತರಕ್ಕೆ ಬೆಳೆಯುವಂತೆ ಮಾಡುತ್ತದೆ. ಜೀವನದಲ್ಲಿ ಹಂತ

ಹಂತವಾಗಿ ಯಶಸ್ಸನ್ನು ಕಠಿಣ ಪರಿಶ್ರಮದಿಂದ ಪಡೆಯಬೇಕು ಎಂದು ಪ್ರೊತ್ಸಾಹ ನೀಡಿದರು. ತನ್ನ ಬದುಕು ಮತ್ತು ಭವಿಷ್ಯವನ್ನು ರೂಪಿಸಿ ಈ ಸಾಧನೆಗೆ ಮಾರ್ಗದರ್ಶಕ ನೀಡಿದ ಸರ್ವಜ್ಞ ಸಂಸ್ಥೆಗೆ ಮತ್ತು ಎಲ್ಲಾ

ಗುರುಗಳಿಗೆ ಕೃತಜ್ಞತೆ ಸಲ್ಲಿಸಿದರು.

ಸಂಸ್ಥೆಯ ಸಂಸ್ಥಾಪಕರಾದ ಪ್ರೊ. ಚನ್ನಾರಡ್ಡಿ ಪಾಟೀಲ ಅವರು ಮಾತನಾಡುತ್ತಾ, ಚಂದ್ರಶೇಖರ್ ಮಾನಸೆಪ್ಪ ಅವರು ನ್ಯಾಯಮೂರ್ತಿ ಡಾ.ಶಿವರಾಜ ವಿ. ಪಾಟೀಲ ಹಾಗೂ ಐ.ಎ.ಎಸ್. ಅಧಿಕಾರಿ ಶಾಲಿನಿ ರಜನೀಶ್ ಅವರ ಮಾತುಗಳಿಂದ ಪ್ರೇರಿತರಾಗಿ, ಉನ್ನತ ಗುರಿ ಇಟ್ಟುಕೊಂಡು, ಸತತ ಪರಿಶ್ರಮದಿಂದ ಓದಿ ಕೇಂದ್ರ ಲೋಕಸೇವಾ ಆಯೋಗದ ಪರೀಕ್ಷೆಯಲ್ಲಿ 880ನೇ ಯಾರ್ಂಕ್ ಪಡೆದು ನಮ್ಮ ಕಾಲೇಜಿಗೆ ಮತ್ತು ಕಲ್ಯಾಣ ಕರ್ನಾಟಕ ಭಾಗಕ್ಕೆ ಹೆಮ್ಮೆಯನ್ನು ತಂದಿದ್ದಾರೆ. ವಿದ್ಯಾರ್ಥಿಗಳು ಕೂಡ ಆ ನಿಟ್ಟಿನಲ್ಲಿ ಉನ್ನತ ಗುರಿ ಇಟ್ಟುಕೊಂಡು ಸಾಧನೆ ಮಾಡಬೇಕೆಂದು ಪ್ರೊತ್ಸಾಹ ನೀಡಿದರು.

ಸಂಸ್ಥೆಯ ಅಧ್ಯಕ್ಷರಾದ ಶ್ರೀಮತಿ ಗೀತಾ ಚನ್ನಾರಡ್ಡಿ ಪಾಟೀಲ ಅವರು ಮಾತನಾಡುತ್ತಾ, "ವಿದ್ಯಾರ್ಥಿಗಳು ಉತ್ತಮವಾದ ಹವ್ಯಾಸವನ್ನು ಬೆಳೆಸಿಕೊಳ್ಳಬೇಕು. ಕಠಿಣ ಪರಿಶ್ರಮದಿಂದ ಅಧ್ಯಯನ ಮಾಡಬೇಕು. ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು. ದೇಶದ ಸತ್ಪ್ರಜೆಯಾಗಿ ಹೊರಹೊಮ್ಮಬೇಕು. ಕಷ್ಟಪಟ್ಟು ಓದಿದರೆ ಜೀವನದಲ್ಲಿ ಬೇಕಾದದ್ದು ಸಾಧನೆ ಮಾಡಲು ಸಾಧ್ಯವಾಗುತ್ತದೆ. ಉನ್ನತವಾದ ಹುದ್ದೆ ಅಲಂಕರಿಸಿದ ಮೇಲೂ

ವಿನಯದಿಂದ ಇರಬೇಕು. ನಾಡೋಜ ನ್ಯಾಯಮೂರ್ತಿ ಡಾ. ಶಿವರಾಜ ವಿ. ಪಾಟೀಲ ಅಪ್ಪ ಅವರ ನುಡಿಮುತ್ತುಗಳು ನಮಗೆ ಮತ್ತು ಮಕ್ಕಳ ಬದುಕಿಗೆ ದಾರಿದೀಪವಾಗಿವೆ. ಅವರಂತೆ ಸಾಧನೆ ಮಾಡಿ ಮೃದುವಾದ ಮನಸ್ಸನ್ನು ಹೊಂದಿದ್ದು ದೇಶ ಸೇವೆ ಮಾಡಬೇಕು ಎಂದು ಮಕ್ಕಳಿಗೆ ಪ್ರೊತ್ಸಾಹ ನೀಡಿದರು.

# ಕ್ಷಯರೋಗ ಗುಣವಾಗಬಹುದಾದ ಕಾಯಿಲೆ : ಡಾ. ರಾಜೇಶ




■ ಉದಯರಶ್ಮಿ ದಿನಪತ್ರಿಕೆ

ಇಂಡಿ: ಕ್ಷಯರೋಗ ನಿಯಂತ್ರಿಸಬಹುದು ಮತ್ತು ಗುಣವಾಗಬಹುದಾದ ಕಾಯಿಲೆ. 6 ರಿಂದ 9 ತಿಂಗಳು ಔಷದ ತೆಗೆದುಕೊಂದರೆ ಸಂಪೂರ್ಣ ಗುಣವಾಗಬಹುದು ಎಂದು ತಾಲೂಕಾ ಆರೋಗ್ಯ ಅಧಿಕಾರಿ ಡಾ॥ ರಾಜೇಶ ಕೋಳೆಕರ ಹೇಳಿದರು.

ನಗರದ ಸಾರ್ವಜನಿಕ ಆಸ್ಪತ್ರೆಯಲ್ಲಿ ಆರೋಗ್ಯ ಇಲಾಖೆಯ ವತಿಯಿಂದ ವಿಶ್ವಕ್ಷಯ ರೋಗ ದಿನಾಚರಣೆ ನಿಮಿತ್ಯ ನಡೆದ ಸಭೆಯಲ್ಲಿ ಮಾತನಾಡಿದರು.

ಕ್ಷಯರೋಗವು ಮೈಕೊಬ್ಯಾಕ್ಟೆರಿಯಂ ಟ್ಯುಬರ ಕ್ಯೂಲೋಸಿಸ ಎಂಬ ಬ್ಯಾಕ್ಟೆರಿಯಾದಿಂದ ಬರುತ್ತದೆ. ಹೆಚ್ಚಾಗಿ ಶ್ವಾಸಕೋಶಕ್ಕೆ ಹಾನಿಮಾಡುವ ಪಲ್ಮನರಿ ಕ್ಷಯರೋಗ ಎಂದು ಕರೆಯಲಾಗುತ್ತಿದೆ. ದೇಹದ ಇತರ ಭಾಗಗಳಿಗೂ ಇದು ಹರಡುತ್ತದೆ ಎಂದರು.

ಡಾ॥ ರವಿ ಭತಗುಣಕಿ, ಡಾ॥ ಚೇತನ ಹುಬ್ಬಳ್ಳಿ, ಡಾ॥ ವಿಕಾಸ ಸಿಂದಗಿ, ಡಾ॥ ರವಿ ಅಂಬೇವಾಡಿ ಕ್ಷಯರೋಗದ ಲಕ್ಷಣ ಗುಣ ಪಡಿಸಬಹುದಾದ ಕ್ರಮಗಳ ಕುರಿತು ಮಾತನಾಡಿದರು.

ವೈದ್ಯರಾದ ಅಮೀತ ಕೋಳೆಕರ, ವಿಪುಲ್ ಕೋಳೆಕರ, ಮನೋಜ ಗಿಡಗಂಟಿ, ಮುಜಮೀಲ್ ಪಾನ, ಪ್ರವೀಣ ಗಜಾಕೋಶ, ಚಿದಾನಂದ ಅರಗೆ, ಬಸವರಾಜ ಪಾಟೀಲ, ಸುನಂದಾ ಅಂಬಲಗಿ, ಮರಿಯಪ್ಪ ದೊಡಮನಿ, ಆನಂದ ಚವ್ಹಾಣ, ಪುಟ್ಟು ಮೆಡೆದಾರ ಸೇರಿದಂತೆ ಪೌರಕಾರ್ಮಿಕರು ಸಾರ್ವಜನಿಕರು ಇದ್ದರು.

# ತೋಟಗಾರಿಕೆ ತರಬೇತಿಗೆ ರೈತರ ಮಕ್ಕಳಿಂದ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: 2026–27 ನೇ ಸಾಲಿನ ತೋಟಗಾರಿಕೆ ಇಲಾಖೆಯ ಅಧೀನದಲ್ಲಿರುವ ತೋಟಗಾರಿಕೆ ತರಬೇತಿ ಕೇಂದ್ರಗಳಲ್ಲಿ, ರೈತರ ಮಕ್ಕಳಿಗೆ ತೋಟಗಾರಿಕೆ ತರಬೇತಿ ಅರ್ಜಿ ಆಹ್ವಾನಿಸಲಾಗಿದೆ.

ವಿಜಯಪುರ ಜಿಲ್ಲೆಗೆ 17 ಅಭ್ಯರ್ಥಿಗಳನ್ನು ಅದರಲ್ಲಿ 06 ಮಹಿಳಾ ಹಾಗೂ 03 ಪರಿಶಿಷ್ಟ ಜಾತಿ ಅಭ್ಯರ್ಥಿಗಳನ್ನು ಒಳಗೊಂಡಂತೆ ರೈತರ ಮಕ್ಕಳಿಗೆ 10 ತಿಂಗಳ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಈ ತರಬೇತಿಗೆ ಜಿಲ್ಲೆಯಿಂದ ಆಯ್ಕೆಯಾದ ಅಭ್ಯರ್ಥಿಗಳಿಗೆ ಕೇವಲ ರೈತ ಮಕ್ಕಳಿಗೆ ಮಾತ್ರ ಬೆಳಗಾವಿ ಜಿಲ್ಲೆಯ ಹಿಡಕಲ್ ಡ್ಯಾಂ, ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ ತರಬೇತಿ ನೀಡಲಾಗುವುದು.

ತರಬೇತಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಕನಿಷ್ಠ ಎಸ್ಸೆಸ್ಸೆಲ್ಸಿ ಪಾಸಾಗಿರಬೇಕು. ಅಭ್ಯರ್ಥಿಯ ತಂದೆ, ತಾಯಿ, ಪೋಷಕರು ಅಥವಾ ಅಭ್ಯರ್ಥಿಯ ಸ್ವತಃ ಹೆಸರಿನಲ್ಲಿ ಜಮೀನು ಇರುವ ಬಗ್ಗೆ, ದಾಖಲೆ ಪಹಣಿಯಲ್ಲಿ ನೋಂದಣಿ ಇರಬೇಕು ಮತ್ತು ಅಭ್ಯರ್ಥಿ ಸ್ವತಃ ಕೃಷಿ–ತೋಟಗಾರಿಕೆ ಭೂಮಿಯಲಿ ಸಾಗುವಳಿ ಮಾಡುತ್ತಿರಬೇಕು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಅಭ್ಯರ್ಥಿಗಳಿಗೆ ಕನಿಷ್ಠ 18 ಗರಿಷ್ಠ 33 ವರ್ಷ, ಮಾಜಿ ಸೈನಿಕರಿಗೆ ಕನಿಷ್ಠ 33 ಗರಿಷ್ಠ 65 ವರ್ಷ ಹಾಗೂ ಸಾಮಾನ್ಯ ಅಭ್ಯರ್ಥಿಗಳಿಗೆ ಕನಿಷ್ಠ 18 ಗರಿಷ್ಠ 30 ವರ್ಷದೊಳಗಿರಬೇಕು.

ತೋಟಗಾರಿಕೆ ತರಬೇತಿ ಪಡೆಯಲು ಬಯಸುವ ವಿಜಯಪುರ ಜಿಲ್ಲೆಯ ರೈತರ ಮಕ್ಕಳು ಅರ್ಜಿಗಳನ್ನು ಜಿಲ್ಲೆಯ ತೋಟಗಾರಿಕೆ ಜಂಟಿ ನಿರ್ದೇಶಕರು ಜಿಲಾ,ಪಂಚಾಯತ್ ವಿಜಯಪುರ ಹಾಗೂ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ರಾಜ್ಯ ವಲಯ ವಿಜಯಪುರ ಅವರ ಕಚೇರಿಗಳಿಂದ ಅಥವಾ ವೆಬ್–ಸೈಟ್ https://horticulturedir.kar.gov.in ನಲ್ಲಿ, ದಿನಾಂಕ: 12–03–2026 ರಿಂದ 13–04–2026 ರ ಒಳಗೆ ಡೌನ್ಲೌಡ್ ಮಾಡಿಕೊಳ್ಳಬಹುದು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಅಭ್ಯರ್ಥಿಗಳಿಗೆ 15 ರೂ. ಸಾಮಾನ್ಯ ಅಭ್ಯರ್ಥಿಗಳಿಗೆ 30 ರೂ. ಮೌಲ್ಯದ ಇಂಡಿಯನ್ ಪೋಸ್ಟಲ್ ಆರ್ಡರ್ (IPO)– ಡಿಮ್ಯಾಂಡ್ ಡ್ರಾಫ್ಟ್ (DD) ಅನ್ನು ತೋಟಗಾರಿಕೆ ಉಪನಿರ್ದೇಶಕರು ಜಿಲ್ಲಾ, ಪಂಚಾಯತ್,ವಿಜಯಪುರ ಅವರ ಹೆಸರಿನಲ್ಲಿ ಪಡೆದು ಅರ್ಜಿಗೆ ಲಗತ್ತಿಸಬೇಕು.

ಭರ್ತಿ ಮಾಡಿದ ಅರ್ಜಿಗಳನ್ನು ದಿನಾಂಕ: 12–03–2026 ರಿಂದ 15–04–2026 ರ ಸಂಜೆ 5.30 ಗಂಟೆಯೊಳಗಾಗಿ ಸಲ್ಲಿಸುವುದು.ಅರ್ಜಿ ಸಲ್ಲಿಕೆಗೆ ಏ.15 ಕೊನೆ ದಿನವಾಗಿದೆ.

ಹೆಚ್ಚಿನ ಮಾಹಿತಿಗೆ ಸಹಾಯಕ ತೋಟಗಾರಿಕೆ ನಿರ್ದೇಶಕರ ಮೊ:8310703511 ಹಾಗೂ ಸಹಾಯಕ ತೋಟಗಾರಿಕೆ ಅಧಿಕಾರಿಗಳ ಮೊ:9535602918 ಸಂಪರ್ಕಿಸಬಹುದಾಗಿದೆ ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



# ಮಲ್ಲಿಕಾರ್ಜುನಮಠ ಗೆ ಪ್ರಶಸ್ತಿ ಪ್ರದಾನ

■ ಉದಯರಶ್ಮಿ ದಿನಪತ್ರಿಕೆ

ದೇವರಹಿಪ್ಪರಗಿ: ಪಟ್ಟಣದ ಬಸಯ್ಯ ಮಲ್ಲಿಕಾರ್ಜುನಮಠ ಇವರು ಶ್ರೀಸುಜ್ಞಾನ ವಿದ್ಯಾಪೀಠ ಮತ್ತು ಸಾಂಸ್ಕೃತಿಕ ರಂಗಕಲಾವಿದರ, ಸಾಧಕರ ಶ್ರೀಮಾತಾ ಪ್ರಕಾಶನ (ರಿ) ಅವರ ಧಾರವಾಡ ನುಡಿ ಸಂಭ್ರಮ ಪ್ರಯುಕ್ತ ನೀಡುವ "ರಾಷ್ಟ್ರಮಟ್ಟದ ಉತ್ತಮ ಸಮಾಜ ಸೇವಾರತ್ನ ಪ್ರಶಸ್ತಿ"ಗೆ ಭಾಜನರಾಗಿದ್ದು, ದಿ:22 ರಂದು ಭಾನುವಾರ ಧಾರವಾಡ ರಂಗಾಯಣ ಸಾಂಸ್ಕೃತಿಕ ಸಮುಚ್ಚಯ ಸಭಾಭವನದಲ್ಲಿ ಜರುಗಿದ ಕಾರ್ಯಕ್ರಮದಲ್ಲಿ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಡಾ.ನಾಗರಾಜ ತಂಬ್ರಹಳ್ಳಿ, ಲೀಲಾಧರ ನಾಯಕ್, ಟಿ.ತ್ಯಾಗರಾಜು ಇದ್ದರು.

# ಇಓ ಆಗಿ ರಾಠೋಡ ಅಧಿಕಾರ ಸ್ವೀಕಾರ

■ ಉದಯರಶ್ಮಿ ದಿನಪತ್ರಿಕೆ



ಚಡಚಣ: ಚಡಚಣ ತಾಲೂಕು ಪಂಚಾಯತಿಯ ತಾಲೂಕು ಕಾರ್ಯನಿರ್ವಾಹಕ ಅಧಿಕಾರಿಗಳಾಗಿ (ಇಓ) ಅಶೋಕ ಕುಮಾರ ರಾಠೋಡರವರು ಸೋಮವಾರದಂದು ಅಧಿಕಾರ ಸ್ವೀಕರಿಸಿದರು.

ಸಂಜಯ ಖಡಗೇಕರ ಅವರ ವರ್ಗಾವಣೆಯಿಂದ ತೆರುವಾದ ಜಾಗದ ಚಡಚಣ ತಾಲೂಕು ಪಂಚಾಯತಿಯ ಇಓ ಆಗಿ ಅಧಿಕಾರ ಸ್ವೀಕರಿಸಿದರು.

ಈ ವೇಳೆಯಲ್ಲಿ ಸಹಾಯಕ ನಿರ್ದೇಶಕರಾದ ಶಿವದತ್ತ ಕೊಟ್ಟಲಗಿಯವರು ಸೇರಿದಂತೆ ಎಲ್ಲ ಅಧಿಕಾರಿಗಳು ಸೇರಿದಂತೆ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಸೇತುವೆ ಕಾರ್ಯ: ಮಾರ್ಗ ಬದಲಾವಣೆ

■ ಉದಯರಶ್ಮಿ ದಿನಪತ್ರಿಕೆ

ಇಂಡಿ: ಇಂಡಿಯಿಂದ ಕಲಬುರಗಿಗೆ ಹೋಗುವ ರಾಜ್ಯ ಕರ್ನಾಟಕ ರಾಜ್ಯ ಸಾರಿಗೆ ಬಸಗಳ ಮಾರ್ಗಗಳನ್ನು ಬದಲಾವಣೆ ಮಾಡಲಾಗಿದೆ ಎಂದು ಘಟಕ ವ್ಯವಸ್ಥಾಪಕ ರೇವಣಸಿದ್ಧ ಖೈನೂರ ತಿಳಿಸಿದ್ದಾರೆ.

ಆಲಮೇಲದಿಂದ ಅಫಝಲಪೂರಕ್ಕೆ ಹೋಗುವ ಮಾರ್ಗದಲ್ಲಿ ದೇವಣಗಾಂವ ಬ್ರಿಡ್ಜ ಕಾರ್ಯ ನಡೆದ ನಿಮಿತ್ಯ ಈ ಕ್ರಮ ಕೈಕೊಳ್ಳಲಾಗಿದೆ.

ಇಂಡಿಯಿಂದ ಕಲಬುರಗಿಗೆ ಹೋಗುವ ಬಸ್ಸುಗಳು ಉಡಚಾಣ ಮಾರ್ಗವಾಗಿ ಅಫಝಲಪೂರಕ್ಕೆ ಹೋಗುವವು ಆದರೆ ದರದಲ್ಲಿ ಯಾವದೇ ಬದಲಾವಣೆ ಇರುವದಿಲ್ಲ ಎಂದು ಖೈನೂರ ತಿಳಿಸಿದ್ದಾರೆ

# ತಾಲೂಕಿನಲ್ಲಿ ಗಾರ್ಮೆಂಟ್ಸ್ ಮತ್ತು ಮಾರುಕಟ್ಟೆ ಸ್ಥಾಪನೆಗೆ ಮಮತ ಮನವಿ

■ ಉದಯರಶ್ಮಿ ದಿನಪತ್ರಿಕೆ



ಹೆಚ್ ಡಿ ಕೋಟೆ: ಎರಡು ಬಾರಿ ಗೆದ್ದು ಇತಿಹಾಸ ನಿರ್ಮಿಸಿರುವ ಶಾಸಕ ಅನಿಲ್ ಚಿಕ್ಕಮಾದು ಅವರು ಅವಳಿ ತಾಲೂಕಿನ ಮಹಿಳೆಯರ ಸ್ವಾವಲಂಬಿ ಬದುಕಿಗಾಗಿ ಹೆಚ್ ಡಿ ಕೋಟೆ ಸುತ್ತಮುತ್ತಲಿನ ಪ್ರದೇಶದಲ್ಲಿ ಗಾರ್ಮೆಂಟ್ಸ್ ಫ್ಯಾಕ್ಟರಿ ತೆರೆದು ಉದ್ಯೋಗ್ಯ ನೀಡಬೇಕೆಂದು ಮೈಸೂರು ಜಿಲ್ಲಾ ಗ್ರಾಮಾಂತರ ಕಾಂಗ್ರೆಸ್ ಸಮಿತಿಯ ಸಹಕಾರ ವಿಭಾಗದ ಹೆಚ್ ಡಿ ಕೋಟೆ ಬ್ಲಾಕ್ ಕಾಂಗ್ರೆಸ್ ನೂತನ ಅಧ್ಯಕ್ಷರಾದ ಮಮತ ನವೀನ್ ಕುಮಾರ್ ಮನವಿ ಮಾಡಿದ್ದಾರೆ.

ತಾಲೂಕಿನ ಯರಹಳ್ಳಿಯಲ್ಲಿ ಮಾತನಾಡಿದ ಮಮತ ನವೀನ್ ಕುಮಾರ್, ಶಾಸಕ ಅನಿಲ್ ಚಿಕ್ಕಮಾದು ಅವರು ಅನೇಕ ಅಭಿವೃದ್ಧಿ ಕೆಲಸ ಕಾರ್ಯ ಮಾಡುತ್ತಾ ಬರುತ್ತಿದ್ದಾರೆ. ಹಿಂದುಳಿದ ತಾಲೂಕು ಎಂಬ ಹಣೆಪಟ್ಟಿ ಕಳಚಲು ಸರ್ಕಾರದಿಂದ ಅನುದಾನ ತಂದು ರಸ್ತೆ, ಸಮುದಾಯ ಭವನ ಸೇರಿದಂತೆ ಅನೇಕ ಅಭಿವೃದ್ಧಿ ಕೆಲಸ ಕೈಗೆತ್ತಿಕೊಂಡಿದ್ದಾರೆ. ಆದರೆ ಹೆಚ್ ಡಿ ಕೋಟೆ, ಸರಗೂರು ತಾಲೂಕಿನಲ್ಲಿ ಯಾವುದೇ ಗಾರ್ಮೆಂಟ್ಸ್ ಫ್ಯಾಕ್ಟರಿ ಇಲ್ಲದ ಹಿನ್ನೆಲೆ ಅವಳಿ ತಾಲೂಕಿನ ಮಹಿಳೆಯರು ಕೆಲಸಕ್ಕಾಗಿ ಮೈಸೂರಿಗೇ ಹೋಗಬೇಕಾಗಿದೆ.

ಇದರಿಂದ ಸಾಕಷ್ಟು ಕಾಲಹರಣ ಆಗುತ್ತಿದ್ದು, ಕುಟುಂಬ ನಿರ್ವಹಣೆಗೂ ಅನಾನುಕೂಲವಾಗಿದೆ. ಹೀಗಾಗಿ ಶಾಸಕರು ಮುಂಬರುವ ವಿಧಾನಸಭಾ ಚುನಾವಣೆಯೊಳಗೆ ಹೆಚ್ ಡಿ ಕೋಟೆ ಅಥವಾ ಸುತ್ತಮುತ್ತಲಿನ ಪ್ರದೇಶದಲ್ಲಿ ಗಾರ್ಮೆಂಟ್ಸ್ ಫ್ಯಾಕ್ಟರಿ ತೆರೆದು, ಮಹಿಳೆಯರಿಗೆ ಇಲ್ಲೇ ಕೆಲಸ ನೀಡಬೇಕೆಂದು ಮನವಿ ಮಾಡಿದ್ದಾರೆ.

ಹಳ್ಳಿಗಳಿಂದ ಆವೃತ್ತವಾಗಿರುವ ಅವಳಿ ತಾಲೂಕಿನ ಬಹುತೇಕ ಮಂದಿಗೆ ವ್ಯವಸಾಯ ಬಿಟ್ಟು ಬೇರೆ ಉದ್ಯೋಗ ಗೊತ್ತಿಲ್ಲ. ವ್ಯವಸಾಯವನ್ನೇ ನಂಬಿ ಜೀವನ ನಡೆಸುತ್ತಿರುವ ರೈತರಿಗೆ ಬೆಳೆಗೆ ಉತ್ತಮ ಬೆಲೆ ಕೂಡ ಸಿಗುತ್ತಿಲ್ಲ. ಅತಿವೃಷ್ಟಿ, ಅನಾವೃಷ್ಟಿ ನಡುವೆ ಮಧ್ಯವರ್ತಿಗಳ ಹಾವಳಿ ಕೂಡ ಜೋರಾಗಿದೆ. ಹೀಗಾಗಿ ರೈತರು ಬೆಳೆದ ಬೆಳೆಗಳಿಗೆ ಸೂಕ್ತ ಬೆಂಬಲ ಸಿಗಬೇಕಾದರೆ, ಹ್ಯಾಂಡ್ ಪೋಸ್ಟ್ ಅಕ್ಕಪಕ್ಕ ಮಾರುಕಟ್ಟೆ ತೆರೆಯಬೇಕು. ಈ ಮೂಲಕ ಮಾರುಕಟ್ಟೆಯ ಬೆಲೆ ನೇರವಾಗಿ ರೈತರಿಗೆ ಸಿಗುವಂತೆ ಶಾಸಕರು ಮಾಡಬೇಕೆಂದು ಮಮತ ನವೀನ್ ಕುಮಾರ್ ಮನವಿ ಮಾಡಿದ್ದಾರೆ.

# ಮಕ್ಕಳಲ್ಲಿ ಸಂಸ್ಕೃತಿ–ಸಂಸ್ಕಾರಗಳು ಮಾಯ : ಸಿದ್ದಾಪೂರ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: ಮಕ್ಕಳಲ್ಲಿ ಸಂಸ್ಕೃತಿ–ಸಂಸ್ಕಾರ ಮತ್ತು ಮೌಲ್ಯವನ್ನು ಕಲಿಸುವಲ್ಲಿ ಇಡೀ ಕುಟುಂಬದ ಪಾತ್ರ ಇದ್ದರೂ ಅದರಲ್ಲಿ ತಾಯಂದಿರ ಪಾತ್ರ ಅತ್ಯಂತ ಪ್ರಮುಖವಾಗಿದೆ. ಅದಕ್ಕಂತಲೇ ಹಿರಿಯರು ಮನೆಯೇ ಮೊದಲ ಪಾಠಶಾಲೆ. ತಾಯಿಯೇ ಮೊದಲ ಗುರು ಎಂದು ಹೇಳಿದ್ದಾರೆ. ಮಗುವು ಚಿಕ್ಕವನಿರುವಾಗಲೇ ತಾಯಿಯಾದವಳು ತಪ್ಪು ಮಾಡಿದಾಗ ತಿದ್ದಿ ಸನ್ಮಾರ್ಗದಲ್ಲಿ ನಡೆಯುವಂತೆ ಪ್ರೋತ್ಸಾಹಿಸಿ, ಒಳ್ಳೆಯ ನಾಗರೀಕನಾಗುವಂತೆ ರೂಪಿಸಬೇಕು ಎಂದು ಹಿರಿಯ ಮಕ್ಕಳ ಸಾಹಿತಿ ಫ.ಗು.ಸಿದ್ದಾಪೂರ ಅವರು ಅಭಿಪ್ರಾಯಪಟ್ಟರು.

ನಗರದ ಅಥಣಿ ರಸ್ತೆಯ ಅಲ್–ಅಮೀನ್ ಆಸ್ಪತ್ರೆ ಎದುರಿಗೆ ಇರುವ ಸೇನಾ ನಗರದ ಶಿವಾಲಯದ ದೇವಸ್ಥಾನದಲ್ಲಿ ಹಿರಿಯ ನಾಗರೀಕರ ಕ್ಷೇಮಾಭಿವೃದ್ಧಿ ಸಂಘ (ರಿ), ನವರಸಪುರ ಇವರ ಸಹಯೋಗದಡಿಯಲ್ಲಿ ಜರುಗಿದ "ಮಕ್ಕಳಲ್ಲಿ ಸಂಸ್ಕೃತಿ–ಸಂಸ್ಕಾರ & ಮೌಲ್ಯಧಾರಣೆಯಲ್ಲಿ ತಾಯಂದಿರ ಪಾತ್ರ" ವಿಷಯ ಕುರಿತ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು.

ಇಂದಿನ ಮಕ್ಕಳಲ್ಲಿ ಸಂಸ್ಕೃತಿ–ಸಂಸ್ಕಾರ ಮಾಯವಾಗುತ್ತಿರುವುದು ತೀರ ಕಳವಳಕಾರಿ ಸಂಗತಿ. ತಾಯಿ ಮಕ್ಕಳಿಗೆ ದೇಶಕ್ಕಾಗಿ ತ್ಯಾಗ ಮಾಡಿದ ವೀರ–ಮಹಾಪುರುಷರು ಜೀವ–ತತ್ವ–ಸಿದ್ದಾಂತ, ರಾಷ್ಟ್ರಪ್ರೇಮ, ತ್ಯಾಗ–ಬಲಿದಾನ ಮತ್ತು ಸಾಧಕರ ಯಶೋಗಾಥೆ–'ಯ ಬಗ್ಗೆ ನೀತಿ ಕಥೆಗಳನ್ನು ಹೇಳುವುದರ ಮೂಲಕ ಮನವರಿಕೆ ಮಾಡಿಕೊಡಬೇಕು. ತನ್ನ ಮಕ್ಕಳನ್ನು ಜಗತ್ತಿಗೆ ಬೆಳಕನ್ನು ನೀಡುವ ಆದರ್ಶ ಮಹಾಪುರುಷರನ್ನಾಗಿ ಮಾಡುವ ಕನಸನ್ನು ನನಸಾಗಿಸುವ ಪ್ರವೃತ್ತಿ ಮತ್ತು ಪ್ರಯತ್ನ ತಾಯಿಯಲ್ಲಿರಬೇಕು. ಮನೆಯಲ್ಲಿನ ಹಿರಿಯರು ಮಕ್ಕಳಿಗೆ ಬಾಲ್ಯದಲ್ಲಿಯೇ ಒಳ್ಳೆಯ ಸಂಸ್ಕಾರ ನೀಡಿ ಅವರು ಮುಂದೆ ದೇಶದ ಜವಾಬ್ದಾರಿಯುತ ನಾಗರೀಕರಾಗಿ ಹೊರ ಹೊಮ್ಮದಂತೆ ರೂಪಿಸಬೇಕಾಗಿರುವುದು ಇಂದಿನ ಅಗತ್ಯತೆಯಾಗಿದೆ ಎಂದರು. ಸಮಾರಂಭದಲ್ಲಿ ಅಧ್ಯಕ್ಷತೆ ವಹಿಸಿದ್ದ ಸಂಘದ ಅಧ್ಯಕ್ಷ ಎಸ್.ಎಲ್. ಇಂಗಳೇಶ್ವರ ಅವರು ಮಾತನಾಡಿದರು.

ಕಾರ್ಯಕ್ರಮದಲ್ಲಿ ಬಿ.ಡಿ.ಕಡಕೋಳ, ಲಕ್ಷ್ಮಣ ಶಿಂಧೆ, ಕೆ.ಜೆ.ಕೋಟ್ಯಾಳ,, ಎಸ್.ಐ.ಹಿರೇಮಠ ಇನ್ನಿತರರು ವೇದಿಕೆಯ ಮೇಲಿದ್ದರು.

ಕಾರ್ಯಕ್ರಮದಲ್ಲಿ ಸುರೇಶ ಹಲಕುಡೆ, ಎ.ಬಿ.ಬಿರಾದಾರ, ಆಶಾ ಬಾಸೂತಕರ, ಶಾಂತಾ ಹೆರಕಲ್, ವೆಂಕಟೇಶ ಹೊಸಮನಿ, ಪ್ರೊ. ಎಂ.ಎಸ್.ಖೊದ್ನಾಪೂರ, ಶಿವಾಲಯ ದೇವಸ್ಥಾನದ ಅಧ್ಯಕ್ಷ ಗುರುಬಸಯ್ಯ ಹಿರೇಮಠ, ಎಸ್.ಎ. ಘೋರ್ಪಡೆ, ಎಸ್.ಎ.ಇಂಗಳೆ, ಶ್ರೀಶೈಲ ಕಿಚಡಿ, ಬಿ.ಆರ್.ಬಿರಾದಾರ, ಎಸ್.ಜಿ., ನಿಂಗನಗೌಡ್ರ ಇನ್ನಿತರರು ಸಹ ಉಪಸ್ಥಿತರಿದ್ದರು. ಎಸ್.ಎಂ.ಸಾಲಿಮಠ ಕಾರ್ಯಕ್ರಮ ನಿರೂಪಿಸಿದರು. ಎ.ಬಿ.ಬಿರಾದಾರ ವಂದಿಸಿದರು.

# ಖಾಯಂ ವೈದ್ಯರ ನೇಮಕಕ್ಕೆ ಆಗ್ರಹಿಸಿ ಕರ್ನಾಟಕ ಸೇನೆ ಮನವಿ

■ ಉದಯರಶ್ಮಿ ದಿನಪತ್ರಿಕೆ




ದೇವರಹಿಪ್ಪರಗಿ: ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ನುರಿತ ಖಾಯಂ ವೈದ್ಯರನ್ನು ನೇಮಕ ಮಾಡುವಂತೆ ಆಗ್ರಹಿಸಿ ನಮ್ಮ ಕರ್ನಾಟಕ ಸೇನೆಯ ಪದಾಧಿಕಾರಿಗಳು ಶಿರಸ್ತೇದಾರ ಸುರೇಶ ಮ್ಯಾಗೇರಿ ಅವರಿಗೆ ಮನವಿ ಸಲ್ಲಿಸಿದರು.ಪಟ್ಟಣದ ತಹಶೀಲ್ದಾರ ಕಾರ್ಯಾಲಯಕ್ಕೆ ಆಗಮಿಸಿದ ನಮ್ಮ ಕರ್ನಾಟಕ ಸೇನೆಯ ಪದಾಧಿಕಾರಿಗಳು ವೈದ್ಯರ ಕುರಿತು ಗಮನ ಸೆಳೆದರು.

ಈ ಸಂದರ್ಭದಲ್ಲಿ ಸೇನೆಯ ತಾಲ್ಲೂಕು ಘಟಕದ ಅಧ್ಯಕ್ಷ ಹಸನ್ ನಧಾಫ್ ಮಾತನಾಡಿ, ತಾಲ್ಲೂಕು ಕೇಂದ್ರದಲ್ಲಿ ನಿರ್ಮಾಣವಾದ ಸಮುದಾಯ ಆರೋಗ್ಯ ಕೇಂದ್ರವನ್ನು ಉದ್ಘಾಟಿಸಿ ಆರಂಭಿಸಿಲ್ಲ. ಜೊತೆಗೆ ಈಗ ಇರುವ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ನುರಿತ ಖಾಯಂ ವೈದ್ಯರಿಲ್ಲ ಹೀಗಾದರೆ ಬಡಜನತೆಯ ಪಾಡೇನು ಎನ್ನುವಂತಾಗಿದೆ. ಪಿಎಚ್‌ಸಿಗೆ ನೇಮಕಗೊಂಡು ಬರುವ ವೈದ್ಯರು 6 ತಿಂಗಳಲ್ಲಿ ಬೇರೆಡೆ ತೆರಳುತ್ತಾರೆ ಹೀಗಾಗಿ ಖಾಯಂ ವೈದ್ಯರು ಇಲ್ಲದ ಸ್ಥಿತಿ ಇಲ್ಲಿನ ಪಿಎಚ್‌ಸಿಯದ್ದಾಗಿದೆ. ಗ್ರಾಮೀಣ ಭಾಗದ ಜನರ ಕಾಳಜಿಯಿಂದಾದರೂ ಕೂಡಲೇ ಖಾಯಂ ವೈದ್ಯರನ್ನು ಕೂಡಲೇ ನೇಮಕ ಮಾಡಬೇಕು. ಇಲ್ಲವಾದರೇ ಎಪ್ರೀಲ್ ದಿ:1 ರಿಂದ ಧರಣಿ ಸತ್ಯಾಗ್ರಹ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿ ಮನವಿ ಸಲ್ಲಿಸಿದರು.

ಚಿದಾನಂದ ಬಜಂತ್ರಿ, ಅಬೂಬಕರ್ ಯಲಗಾರ, ಮಲ್ಲಿಕಾರ್ಜುನ ಬಜಂತ್ರಿ ಹಾಗೂ ಸೇನೆಯ ಪದಾಧಿಕಾರಿಗಳು ಇದ್ದರು.

# ಕಾಲುವೆಗೆ ನೀರು ಬಿಡಲು ಆಗ್ರಹಿಸಿ ಪ್ರತಿಭಟನೆ

■ ಉದಯರಶ್ಮಿ ದಿನಪತ್ರಿಕೆ




ಇಂಡಿ: ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ ಕಾರ್ಯಕರ್ತರು ತಾಲೂಕಿನ ಹಿರೇಬೇವನೂರ ಗ್ರಾಮದಲ್ಲಿ ಹರಿಯುವ ಕೃಷ್ಣಾ ಕಾಲುವೆಯ ಡಿಸ್ಟ್ರಿಬ್ಯೂಟರ್ 23 ಮತ್ತು 24 ಕ್ಕೆ ನೀರು ಬಿಡಬೇಕೆಂದು ಆಗ್ರಹಿಸಿ ಆಡಳಿತ ಸೌಧ ಎದುರು ಪ್ರತಿಭಟನೆ ನಡೆಸಿದರು.

ಸಂಘದ ತಾಲೂಕಾ ಅಧ್ಯಕ್ಷ ಎಂ.ಎಚ್.ಪೂಜಾರಿ ಮಾತನಾಡಿ, ಹಿರೇಬೇವನೂರ ಭಾಗದ ಹೊಲಗಳಿಗೆ ನೀರಿನ ಅವಶ್ಯಕತೆ ಇದೆ. ಕಾರಣ ಈ ಕೂಡಲೇ ನೀರು ಬಿಡಬೇಕು. ಇಲ್ಲದಿದ್ದರೆ ಉಗ್ರ ಹೋರಾಟ ಮಾಡಲಾಗುವದೆಂದರು. ಬೆಳೆಗಳಿಗೆ ಸೇರಿದಂತೆ ಜನ ಜಾನುವಾರುಗಳಿಗೂ ನೀರಿನ ತೊಂದರೆ ಯಾಗುತ್ತದೆ ಎಂದರು.

ಸಿದ್ದರಾಮ ಹಂಜಗಿ, ಸುರೇಶ ಪಾಯಿಕರ, ಸಂಜು ಹಿರೇಕುರುಬರ, ಧನು ರಾಠೋಡ, ದತ್ತು ಹೆಳವರ, ಮಾಂತು ಬಡಿಗೇರ, ಸುರೇಶ ಹಂಜಗಿ ಮತ್ತಿತ–ರಿದ್ದರು.. ಕಂದಾಯ ಉಪವಿಭಾಗಾಧಿರಿ ಚಿದಾನಂದ ಗುರುಸ್ವಾಮಿ ಇವರಿಗೆ ಮನವಿ ಪತ್ರ ಸಲ್ಲಿಸಿದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR